MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 255 | ಗುರುವಾರ : 24-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 255 | THURSDAY : 24-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರಾಯಚೂರ ಸಿಟಿಯಲ್ಲಿ ರೋಬೋಟಿಕ್ ಸ್ಕ್ಯಾವೆಂಜರ್ ಬಳಕೆಗೆ ಚಾಲನೆ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.23–**ಮ್ಯಾನ್ ಹೋಲ್ ಗಳನ್ನು ಸ್ವಚ್ಛಗೊಳಿಸಲು ರೂಪಿಸಿ ರುವ ವಿಶ್ವದ ಮೊದಲ ರೋಬೋಟಿಕ್ ಸ್ಕ್ಯಾವೆಂಜರ್ ಬ್ಯಾಂಡಿಕೂಟ್ ಯಂತ್ರದ ಬಳಕೆಗೆ ರಾಯಚೂರ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಬುಧವಾರ ಚಾಲನೆ ನೀಡಿದರು.

ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ಪಾಲಿಕೆಯ ಕಚೇರಿ ಮುಂದಿನ ರಸ್ತೆಯಲ್ಲಿನ ಮ್ಯಾನ್‌ಹೋಲ್‌ನ್ನು ನೂತನ ರೋಬೋಟಿಕ್ ಸ್ಕ್ಯಾವೆಂಜರ್ ಯಂತ್ರದ ಮೂಲಕ ಶುಚಿಗೊಳಿಸುವುದನ್ನು ಖುದ್ದು ವೀಕ್ಷಣೆ ನಡೆಸಿ ಮಾತನಾಡಿದ ಆಯುಕ್ತರು, ಕರ್ನಾಟಕ ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿ ಈ ನೂತನ ಯಂತ್ರವನ್ನು ಬಳಕೆಗೆ ತಂದ ಹೆಗ್ಗಳಿಕೆಗೆ ರಾಯಚೂರ ಮಹಾನಗರ ಪಾಲಿಕೆಯು ಪಾತ್ರವಾಗಿದೆ. ಸಾರ್ವಜನಿಕ ಸೇವಾ ಕಾರ್ಯಗಳನ್ನು ಸುಧಾರಿಸುವಲ್ಲಿ ಹಾಗೂ ಸುರಕ್ಷತೆಯನ್ನು ಖಚಿತಪಡಿಸುವಲ್ಲಿ ಈ ಯಂತ್ರವು ಪ್ರಮುಖ ಪಾತ್ರ ವಹಿಸುತ್ತದೆ. ಮತ್ತು ಪ್ರತಿಯೊಬ್ಬ ವ್ಯಕ್ತಿಯ




ಘನತೆಯನ್ನು ಎತ್ತಿಹಿಡಿಯುವಲ್ಲಿ ಹೊಸ ಯಂತ್ರವನ್ನು ಬಳಸಿಕೊಂಡ ಕೀರ್ತಿಗೆ ರಾಯಚೂರು ಮಹಾನಗರ ಪಾಲಿಕೆಯು ಪಾತ್ರವಾಗಿದೆ ಎಂದು ಹೇಳಲು ತಮಗೆ ಸಂತಸವಾಗುತ್ತಿದೆ ಎಂದು ತಿಳಿಸಿದರು.

ರಾಯಚೂರನ್ನು ಸ್ವಚ್ಛ, ಸುರಕ್ಷಿತ ಮತ್ತು ಸ್ಮಾರ್ಟ್ ನಗರ ಮಾಡಬೇಕು ಎಂಬುದು ನಮ್ಮ ಗುರಿಯಾಗಿದೆ. ಈ ದಿಶೆಯಲ್ಲಿ ನಾವು ಹೊಸ ಹೊಸ ಪ್ರಯೋಗ ಮಾಡುತ್ತಿದ್ದೇವೆ. ಹಸ್ತಚಾಲಿತ ಸ್ಕ್ಯಾವೆಂಜಿಂಗ್ ದುರಾವಸ್ಥೆಯನ್ನು ನಿರ್ಮೂಲನೆ ಮಾಡುವುದು ಮತ್ತು ಕಾರ್ಮಿಕರ ಜೀವ ರಕ್ಷಣೆ ಮಾಡಬೇಕು ಎಂಬುದಕ್ಕೆ ಮಹಾನಗರ ಪಾಲಿಕೆಯು ಬದ್ಧವಾಗಿದೆ. ಈ ಬ್ಯಾಂಡಿಕೂಟ್ ಬಳಕೆಯ ಮೂಲಕ ರಾಯಚೂರು ನಗರವು ಹೊಸ ನಾವೀನ್ಯತೆ ಹೊಂದಿ ನಮ್ಮ ರಾಜ್ಯದ ಹಾಗೂ ದೇಶದ ಬೇರೆ ಬೇರೆ ನಗರಗಳಿಗೆ ಮಾದರಿಯಾಗಿ ಹೊರಹೊಮ್ಮಲಿದೆ ಎಂದು ತಿಳಿಸಿದರು.(**2ನೇಪುಟಕ್ಕೆ**)

## ಅಧಿಕಾರಿಗಳ ಜೊತೆ ಸಿಎಂ ಸಭೆ

**ಬೆಂಗಳೂರು, ಜು.23–** ರಾಜ್ಯದಲ್ಲಿ ಸಣ್ಣ ವ್ಯಾಪಾರಿಗಳ ತೀವ್ರ ಆಕ್ರೋಶಕ್ಕೆ ಕಾರಣವಾಗಿರುವ ವಾಣಿಜ್ಯ ತೆರಿಗೆ ಇಲಾಖೆಯ ಜಿಎಸ್‌ಟಿ ನೋಟಿಸ್‌ನ ಸಮಸ್ಯೆಗೆ ಪರಿಹಾರ ರೂಪಿಸಲು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಇಂದು ಸಂಜೆ ಅಧಿಕಾರಿಗಳ ಸಭೆ ಕರೆದಿದ್ದಾರೆ.

ರಾಜ್ಯದಲ್ಲಿ ವಾರ್ಷಿಕ 40 ಲಕ್ಷ ರೂ. ವಹಿವಾಟು ನಡೆಸುವ ಸಣ್ಣ ಹಾಗೂ ಅತಿ ಸಣ್ಣ ಉದ್ಯಮಿಗಳಿಗೆ ರಾಜ್ಯದ ವಾಣಿಜ್ಯ ತೆರಿಗೆ ಇಲಾಖೆ ನೋಟಿಸ್ ನೀಡಿದ್ದು, ಈ ನೋಟಿಸ್ ನೀಡಿಕೆ ರಾಜ್ಯಾದ್ಯಂತ ಸಣ್ಣ ವ್ಯಾಪಾರಿಗಳ ಆಕ್ರೋಶಕ್ಕೆ ಕಾರಣವಾಗಿದೆ.

ವಾಣಿಜ್ಯ ತೆರಿಗೆ ಇಲಾಖೆಯ ನೋಟಿಸ್ ಹಿನ್ನೆಲೆಯಲ್ಲಿ ಸಣ್ಣ ವ್ಯಾಪಾರಿಗಳು ಯುಪಿಐ ಪಾವತಿಯನ್ನು ಸ್ಥಗಿತಗೊಳಿಸಿ, ಗ್ರಾಹಕರಿಗೆ ನಗದು ನೀಡುವಂತೆ ಮನವಿ ಮಾಡುತ್ತಿದ್ದು, ಇದು ಡಿಜಿಟಲ್ ವಹಿವಾಟಿನ ಮೇಲೂ ಪರಿಣಾಮ ಬೀರಿದೆ ಸಣ್ಣ ವ್ಯಾಪಾರಿಗಳು ಈ ನೋಟಿಸ್‌ನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿ ನಾಳೆಯಿಂದ ನಮ್ಮ ಅಂಗಡಿಗಳನ್ನು ಬಂದ್ ಮಾಡುವ ಜತೆಗೆ ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ಧರಣಿ ನಡೆಸಲು ತೀರ್ಮಾನಿಸಿದ್ದಾರೆ.

ಈ ಎಲ್ಲ ಬೆಳವಣಿಗೆಗಳ ಹಿನ್ನೆಯಲ್ಲಿ ಈ ನೋಟಿಸ್ ನೀಡಿಕೆ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಮುಖ್ಯಮಂತ್ರಿ



ಸಿದ್ಧರಾಮಯ್ಯ ಇಂದು ಸಂಜೆ ಹಣಕಾಸು ಇಲಾಖೆಯ ಹಿರಿಯ ಅಧಿಕಾರಿಗಳ ಸಭೆ ಕರೆದಿದ್ದಾರೆ.

ವಾಣಿಜ್ಯ ತೆರಿಗೆ ಇಲಾಖೆಯ ಈ ನೋಟಿಸ್ ನೀಡಿಕೆ ವಿಚಾರ ಆಡಳಿತರೂಢ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ಜಟಾಪಟಿಗೆ ಕಾರಣವಾಗಿತ್ತು. ಈ ನೋಟಿಸ್ ನೀಡಿಕೆಗೆ ಕೇಂದ್ರ ಸರ್ಕಾರದ ಆದೇಶವೇ ಕಾರಣ ಎಂದು ರಾಜ್ಯ ಸರ್ಕಾರ ಪ್ರತಿಪಾದಿಸಿದ್ದರೇ, ಬಿಜೆಪಿ ಈ ನೋಟಿಸ್‌ಗೂ ಕೇಂದ್ರಕ್ಕೂ ಸಂಬಂಧ ಇಲ್ಲ. ಕಾಂಗ್ರೆಸ್ ಸರ್ಕಾರ ಸರ್ಕಾರ ಬರಿದಾಗಿರುವ ಖಜಾನೆ ತುಂಬಿಸಿಕೊಳ್ಳಲು ಸಣ್ಣ ವ್ಯಾಪಾರಿಗಳಿಗೆ ನೋಟಿಸ್ ನೀಡಿದೆ ಎಂದು ಆರೋಪಿಸಿದೆ.

ಈ ನೋಟಿಸ್ ವಿಚಾರ ಈಗ ರಾಜ್ಯದಲ್ಲಿ ದೊಡ್ಡ ಮಟ್ಟದ ಚರ್ಚೆಗೂ ಗ್ರಾಸವಾಗಿದೆ.

## ಧರ್ಮಸ್ಥಳದಲ್ಲಿ ಅಸಹಜ ಸಾವು ಪ್ರಕರಣದ ತನಿಖೆಗೆ 20 ಅಧಿಕಾರಿಗಳ ಎಸ್‌ಐಟಿ ರಚನೆ

**ಬೆಂಗಳೂರು, ಜು.23–** ರಾಜ್ಯಾದ್ಯಂತ ಭಾರೀ ವಿವಾದ ಸೃಷ್ಟಿಸಿರುವ ಶ್ರೀ ಕ್ಷೇತ್ರ ಧರ್ಮಸ್ಥಳದ ಸಾಮೂಹಿಕ ಅಸಹಜ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಎಸ್‌ಐಟಿ ರಚನೆ ಮಾಡಿರುವುದರ ಜೊತೆಗೆ 20 ಅಧಿಕಾರಿಗಳ ತಂಡಕ್ಕೆ ತನಿಖೆಯ ನೇತೃತ್ವ ವಹಿಸಿದೆ. ವ್ಯಾಪಕ ಸಾರ್ವಜನಿಕ ಆಕ್ರೋಶಕ್ಕೆ ಕಾರಣವಾಗಿರುವ ಗೊಂದಲದ ಆರೋಪಗಳ ಬಗ್ಗೆ ಈ ತಂಡವು ಸಮಗ್ರ ತನಿಖೆ ನಡೆಸಲಿದೆ.

ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾಗಿರುವ ಅಸಹಜ ಸಾವುಗಳ ಕುರಿತಾಗಿ ಕೇಳಿ ಬಂದ ಆರೋಪಗಳಿಗೆ ಸಂಬಂಧಿಸಿದಂತೆ ತನಿಖೆ ನಡೆಸಲು ರಾಜ್ಯ ಸರ್ಕಾರ ಡಾ. ಪ್ರಣವ್ ಮೊಹಂತಿ ನೇತೃತ್ವದಲ್ಲಿ ಎಸ್‌ಐಟಿಯನ್ನು ರಚನೆ ಮಾಡಿ ಆದೇಶ ಹೊರಡಿಸಿದೆ. ಎಸ್‌ಐಟಿ ಸದಸ್ಯರಾಗಿ ಅನುಚೇತ್, ಸೌಮ್ಯ ಲತಾ, ಜಿತೇಂದ್ರ ಕುಮಾರ್ ಇದ್ದಾರೆ.

ಇವರ ಜೊತೆಗೆ ಆಂತರಿಕ ಭದ್ರತಾ ವಿಭಾಗದ ಡಿಜಿಪಿ ಡಾ. ಪ್ರಣವ್ ಮೊಹಾಂತಿ ನೇತೃತ್ವದಲ್ಲಿ 20 ಖಡಕ್ ಪೊಲೀಸ್ ಅಧಿಕಾರಿಗಳನ್ನು ಒಳಗೊಂಡ ವಿಶೇಷ ತನಿಖಾ ತಂಡವನ್ನು ರಚಿಸಿದೆ. ಈ ತಂಡದಲ್ಲಿ 1 ಎಸ್ಪಿ, 2 ಡಿಎಸ್ಪಿ, 4 ಪೊಲೀಸ್ ಇನ್‌ಸ್ಪೆಕ್ಟರ್, ಸಿಪಿಐ, 7 ಪಿಎಸ್‌ಐ, 1 ಎಎಸ್‌ಐ ಮತ್ತು 4 ಮುಖ್ಯ ಪೇದೆಗಳು ಸೇರಿದ್ದಾರೆ. ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಿಂದ ಆಯ್ಕೆಯಾದ ಈ ಅಧಿಕಾರಿಗಳು ಡಿಸಿಆರ್‌ಇ, ಕರಾವಳಿ ಭದ್ರತಾ ಪೊಲೀಸ್, ಮೆಸ್ಕಾಂ ಮತ್ತು ಎಫ್.ಎಂಎಸ್ ವಿಭಾಗಗಳಿಂದ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದಾರೆ.

ಡಿಜಿ–ಐಜಿಪಿ ಡಾ.ಎಂ.ಎ.ಸಲೀಂ ಅವರಿಂದ ಈ ತಂಡಕ್ಕೆ ಅಧಿಕೃತ ಆದೇಶವನ್ನು ಹೊರಡಿಸಲಾಗಿದ್ದು, ತನಿಖೆಯ ಪ್ರಗತಿಯನ್ನು ನಿಯಮಿತವಾಗಿ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ವರದಿಯಾಗಿ ಸಲ್ಲಿಸಲಾಗುವುದು ತಂಡವು ಧರ್ಮಸ್ಥಳ ಪೊಲೀಸ್ ಠಾಣೆಯಿಂದ ಪ್ರಕರಣದ ವಿವರಗಳನ್ನು ಸಂಗ್ರಹಿಸಿ, ಸ್ಥಳ ಪರಿಶೀಲನೆ, ಸಾಕ್ಷಿಗಳ ವಿಚಾರಣೆ ಮತ್ತು ಅಸ್ಥಿಪಂಜರಗಳ ಡಿಎನ್‌ಎ ಪರೀಕ್ಷೆಯನ್ನು ನಡೆಸಲಿದೆ.

ಎಸ್‌ಐಟಿ ತಂಡವು ಈಗ ಧರ್ಮಸ್ಥಳದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಶವಗಳ ದಫನ ಸ್ಥಳಗಳನ್ನು ಗುರುತಿಸಲು ಮತ್ತು ಅಸ್ಥಿಪಂಜರಗಳ ವೈದ್ಯಕೀಯ ಪರೀಕ್ಷೆಯನ್ನು ನಡೆಸಲು ಕಾರ್ಯ ಪ್ರವೃತ್ತವಾಗಿದೆ. ಪೊಲೀಸ್ ದಾಖಲೆಗಳ ಜೊತೆಗೆ, ಸಾಕ್ಷಿಗಳ ಹೇಳಿಕೆ ಮತ್ತು ಸ್ಥಳೀಯರ ಸಹಕಾರದೊಂದಿಗೆ ಈ ಪ್ರಕರ ಣವನ್ನು ಭೇದಿಸಲು ಕೆದಕಲು ತಂಡವು ಸಿದ್ಧತೆ ನಡೆಸಿದೆ. ಈ ತನಿಖೆಯ ಫಲಿತಾಂಶವು ಧರ್ಮಸ್ಥಳದಲ್ಲಿ ನಡೆದ ಈ ಗಂಭೀರ ಆರೋಪಗಳ ಸತ್ಯಾಸತ್ಯತೆಯನ್ನು ಬೆಳಕಿಗೆ ತರಲಿದೆ ಎಂಬ ನಿರೀಕ್ಷೆಯಿದೆ.

ಧರ್ಮಸ್ಥಳದ ಘಟನೆಗಳಿಗೆ ಸಂಬಂಧಿಸಿ ದಂತೆ ವಿಶೇಷ ತನಿಖಾ ದಳ ರಚನೆ ಮಾಡಬೇಕು ಎಂಬ ಬೇಡಿಕೆ ಇತ್ತು. ಹಿರಿಯ ವಕೀಲರ ತಂಡ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಮಾಡಿತ್ತು. ಅದರಂತೆ ಇದೀಗ ಎಸ್‌ಐಟಿ ರಚನೆ ಆಗಿದೆ. ಎಸ್‌ಐಟಿ ತಂಡವು ಧರ್ಮಸ್ಥಳದಲ್ಲಿ 20 ವರ್ಷಗ ಳಿಂದ ನಾಪತ್ತೆಯಾಗಿರುವ ಮಹಿಳೆಯರು, ವಿದ್ಯಾರ್ಥಿನಿಯರು, ಹಲ್ಲೆ, ಅಸ್ವಾಭಾವಿಕ ಸಾವು ಸೇರಿದಂತೆ ಇತರ ಪ್ರಕರಣಗಳ ಬಗ್ಗೆ ತನಿಖೆ ನಡೆಸಿ ಸರ್ಕಾರಕ್ಕೆ ವರದಿ ಯನ್ನು ನೀಡಲಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮದಲ್ಲಿ ಕಳೆದ ಎರಡು ದಶಕಗಳಿಂದ ನೂರಾರು ಅಸಹಜ ಸಾವುಗಳು ನಡೆದಿದೆ ಎಂಬ ಚರ್ಚೆ ಕಾವು ಪಡೆದ ಬೆನ್ನಲ್ಲೇ, ತನಿಖೆ ತೀವ್ರಗೊಂಡಿದೆ. ಇನ್ನು ಶವಗಳನ್ನು ರಹಸ್ಯವಾಗಿ ಹೂಳಲಾಗಿದೆ ಎಂಬ ಆರೋಪ ಪ್ರಕರಣ ರಾಜ್ಯಾದ್ಯಂತ ತೀವ್ರ ಸಂಚಲನ ಮೂಡಿಸಿದೆ. ಈ ಬಗ್ಗೆ (**2ನೇಪುಟಕ್ಕೆ**)

## ಸ್ವ–ಸಹಾಯ ಸಂಘದ ಸದಸ್ಯರು ಉತ್ತಮವಾಗಿ ಕಾರ್ಯನಿರ್ವಹಿಸಲಿ: ಸಾಜೀದ್ ಸಮೀರ್

ಯುವ ಮಾರ್ಗ ಸುದ್ದಿ

**ರಾಯಚೂರು.ಜು.23–** ಮಹಾನಗರಪಾಲಿಕೆಯೊಂದಿಗೆ ಉದ್ದೇಶಿತ ಸ್ವ ಸಹಾಯ ಸಂಘಗಳು ಚಟುವಟಿಕೆಗಳ ಬಗ್ಗೆ ಒಡಂಬಡಿಕೆಯಂತೆ ಮಹಾನಗರ ಪಾಲಿಕೆಯಿಂದ ನಿಗದಿಪಡಿಸಲಾದ ಕರ ವಸೂಲಿಯ ಗುರಿ ಸಾಧನೆಗೆ ಶ್ರಮಿಸಬೇಕು. ಪಾಲಿಕೆಯ ಅಭಿವೃದ್ಧಿಯಲ್ಲಿ ಸ್ವ–ಸಹಾಯ ಸಂಘದ ಸದಸ್ಯರ ಪಾತ್ರ ಮಹತ್ವ ಪಡೆದುಕೊಳ್ಳಲಿ ಎಂದು ರಾಯಚೂರು ಮಹಾನಗರ ಪಾಲಿಕೆಯ ಪ್ರಭಾರ ಅಧ್ಯಕ್ಷರಾದ ಸಾಜೀದ್ ಸಮೀರ್ ಅವರು ಹೇಳಿದರು.

ಬುಧವಾರ ದಂದು ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ, ಸಮರ್ಪಕ ವಸೂಲಾತಿಗಾಗಿ ಸಮಿತಿಯ ಮೂಲಕ ಆಯ್ಕೆ ಮಾಡಿದ 25 ಸದಸ್ಯರಿಗೆ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು.

ಮಹಾನಗರ ಪಾಲಿಕೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಇತ್ತೀಚೆಗೆ ಬಹಳಷ್ಟು ಕಾರ್ಯಗಳು ನಡೆಯುತ್ತಿವೆ. ಅಧಿಕಾರಿಗಳು ಮತ್ತು ಸಿಬ್ಬಂದಿಯ ಮಾರ್ಗದರ್ಶನದಲ್ಲಿ ಸ್ವ–ಸಹಾಯ ಸಂಘದ ಸದಸ್ಯರು ಕಾರ್ಯ ನಿರ್ವಹಿಸಬೇಕು. ಪಾಲಿಕೆಯ ಅಭಿವೃದ್ಧಿಗೆ ಶ್ರಮಿಸಬೇಕು ಎಂದು



ತಿಳಿಸಿದರು.ಈ ವೇಳೆ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ ಅವರು ಮಾತನಾಡಿ, ಸ್ವ–ಸಹಾಯ ಸಂಘದ ಸದಸ್ಯರು ಕರ ವಸೂಲಾತಿಯ ಬಗ್ಗೆ ಸಂಬಂಧಪಟ್ಟ ಕಂದಾಯ ಶಾಖೆಯ ಅಧಿಕಾರಿ ಅಥವಾ ಸಿಬ್ಬಂದಿಗೆ ವರದಿ ಸಲ್ಲಿಸಬೇಕು. ಕ್ಷೇತ್ರದಲ್ಲಿ ಯಾವುದೇ ಅಡೆತಡೆ ಅಥವಾ ತೊಂದರೆಗಳು ಕಂಡುಬಂದಲ್ಲಿ ಮಹಾನಗರಪಾಲಿಕೆಯ ಸಂಬಂಧಪಟ್ಟ ಕಂದಾಯ ಶಾಖೆಯ ಅಧಿಕಾರಿಗಳ ಗಮನಕ್ಕೆ ತರಬೇಕೆಂದರು.

ಸ್ವೀಕೃತ ತೆರಿಗೆ ಹಾಗೂ ಶುಲ್ಕ ದುರುಪಯೋಗ ಆಗದಂತೆ ನೋಡಿಕೊಳ್ಳಬೇಕು. ಮಹಾನಗರ ಪಾಲಿಕೆಯಿಂದ ಸೂಚಿಸಲಾಗುವ ದಾಖಲಾತಿಗಳನ್ನು ಸರಿಯಾಗಿ ನಿರ್ವಹಣೆ ಮಾಡಬೇಕು. ಕರ ವಸೂಲಾತಿಗಾಗಿ ಕ್ಷೇತ್ರ ಭೇಟಿ ನೀಡುವಾಗ ಕಡ್ಡಾಯವಾಗಿ ಗುರುತಿನ ಚೀಟಿ ಧರಿಸಬೇಕೆಂದರು.

ಆಯ್ಕೆಯಾದ ಸ್ವ–ಸಹಾಯ ಗುಂಪಿನ ಮೂಲಕವೇ ಬೆಳಿಗ್ಗೆ 9ರಿಂದ ಸಂಜೆ 6 ಗಂಟೆವರೆಗೂ ಕರ ವಸೂಲಾತಿ ಕಾರ್ಯ ಮಾಡಬೇಕು. ಯಾವುದೇ ಉಪಗುತ್ತಿಗೆ ನೀಡತಕದ್ದಲ್ಲ. ಆಯ್ಕೆಯಾದ ಮಹಿಳಾ ಸ್ವಸಹಾಯ ಗುಂಪಿನ ಸದಸ್ಯರು ಮಾತ್ರ ವಸೂಲಾತಿ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು. ಇತರೆ ಸ್ವ–ಸಹಾಯ ಗುಂಪಿನ ಸದಸ್ಯರು ಮತ್ತು ಇತರೆ ವ್ಯಕ್ತಿ ಅಥವಾ ಸಂಸ್ಥೆ ತೊಡಗಿಸಿಕೊಂಡು ವಸೂಲಾತಿ ಮಾಡಲು ಅವಕಾಶ ಇರುವುದಿಲ್ಲ ಎಂದರು.

ಆಯ್ಕೆಯಾದ ಮಹಿಳಾ ಸ್ವ–ಸಹಾಯ ಗುಂಪಿನ ಅಧ್ಯಕ್ಷರು ಕರ (**2ನೇಪುಟಕ್ಕೆ**)

## ಗಿಲ್ಲೆಸೂಗೂರು ತಾಲ್ಲೂಕು ಘೋಷಣೆಗೆ ಆಗ್ರಹಿಸಿ ಪ್ರಥಮ ಸಮಿತಿ ಸಭೆ

ಯುವ ಮಾರ್ಗ ಸುದ್ದಿ

**ಗಿಲ್ಲೆಸೂಗೂರು,ಜು.23–** ಗಿಲ್ಲೆಸೂಗೂರಿನ ಐ.ಬಿ.ಯಲ್ಲಿ ಬುಧವಾರ ಗಿಲ್ಲೆಸೂಗೂರು ತಾಲ್ಲೂಕು ಘೋಷಣೆಗೆ ಒತ್ತಾಯಿಸಿ ಪ್ರಥಮ ತಾಲ್ಲೂಕು ಸಮಿತಿ ಸಭೆಯನ್ನು ಕರೆಯಲಾಗಿತ್ತು. ಈ ಸಭೆಯಲ್ಲಿ ಗಿಲ್ಲೆಸೂಗೂರು ಪ್ರತ್ಯೇಕ ತಾಲ್ಲೂಕಾಗಬೇಕು ಎಂಬ ಬಹುದಿನಗಳ ಬೇಡಿಕೆಯನ್ನು ಮತ್ತೊಮ್ಮೆ ಪ್ರಮುಖವಾಗಿ ಪ್ರಸ್ತಾಪಿಸಲಾಯಿತು.

ಸಭೆಯಲ್ಲಿ, ಈ ಹೋರಾಟವನ್ನು ತೀವ್ರಗೊಳಿಸುವ ನಿಟ್ಟಿನಲ್ಲಿ ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು. ತಾಲ್ಲೂಕು ಸಮಿತಿಯನ್ನು ರಚಿಸುವುದು, ಗಿಲ್ಲೆಸೂಗೂರಿನ ಸುತ್ತಮುತ್ತಲಿನ ಎಲ್ಲಾ ಹಳ್ಳಿಗಳಿಗೆ ಭೇಟಿ ನೀಡಿ ಜನಜಾಗೃತಿ ಮೂಡಿಸುವುದು ಸೇರಿದಂತೆ ಹಲವು ಕಾರ್ಯತಂತ್ರಗಳ ಬಗ್ಗೆ ಕೂಲಂಕಷವಾಗಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಪ್ರಮುಖರು ಉಪಸ್ಥಿತರಿದ್ದರು. ಈರೇಶ ಗ್ರಾ.ಪಂ ಸದಸ್ಯರು ಗಿಲ್ಲೆಸೂಗೂರು, ಎ.ನರಸಿಂಹ ನಾಯಕ, ಸಾಬಣ್ಣ ಗಟ್ಟುಬಿಚ್ಚಾಲಿ, ಗುರುಸ್ವಾಮಿ, ಆರ್. ನರಸಿಂಹ, ರಾಮಣ್ಣ ಕೆರೆಬೂದುರು, ಹನುಮಂತ ಗಿಲ್ಲೆಸೂಗೂರು, ಭರತ್ ನಾಯಕ್ ಗಿಲ್ಲೆ



ಸೂಗೂರು, ರಾಜರತ್ನ ಗಟ್ಟುಬಿಚ್ಚಾಲಿ, ರಾಜು ಗಟ್ಟುಬಿಚ್ಚಾಲಿ, ರಮೇಶ್ ರೈತ ಸಂಘದ ಅಧ್ಯಕ್ಷರು, ರಾಘವೇಂದ್ರ ಯದ್ಲಾಪುರ, ತಿಮ್ಮಪ್ಪ ಗಿಲ್ಲೆಸೂಗೂರು, ದುಲ್ಲಯ್ಯ ನಾಯಕ್ ಬುಡದಿನ್ನಿ, ಹನುಮಂತ ನಾಯಕ್ ಗಿಲ್ಲೆಸೂಗೂರು, ಈರಣ್ಣ ತುಂಗಭದ್ರಾ, ರಮೇಶ ಗಿಲ್ಲೆಸೂಗೂರು, ನರಸಿಂಹ ಯದ್ಲಾಪುರ, ಇಸಾಕ್ ಗಿಲ್ಲೆಸೂಗೂರು ಸೇರಿದಂತೆ ಅನೇಕ ಗಣ್ಯರು ಸಭೆಯಲ್ಲಿ ಭಾಗವಹಿಸಿ, ಗಿಲ್ಲೆಸೂಗೂರು ತಾಲ್ಲೂಕು ಹೋರಾಟಕ್ಕೆ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದರು.ಮುಂದಿನ ದಿನಗಳಲ್ಲಿ ಈ ಹೋರಾಟವನ್ನು ತೀವ್ರಗೊಳಿಸಲು, ಸರ್ಕಾರದ ಮೇಲೆ ಒತ್ತಡ ಹೇರಲು ಸಮಿತಿ ಸಭೆಯು ನಿರ್ಧರಿಸಿದೆ.

## ನೀರಮಾನ್ವಿ ಸರ್ಕಾರಿ ಪ್ರೌಢಶಾಲೆಯ ನೂತನ ಶಾಲಾ ಅಭಿವೃದ್ಧಿ ಸಮಿತಿಯ ಆಯ್ಕೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಜು.23–**ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿನ ಸರ್ಕಾರಿ ಪ್ರೌಢಶಾಲೆಯ ನೂತನ ಶಾಲಾ ಅಭಿವೃದ್ಧಿ ಸಮಿತಿಯ ನೂತನ ಅಧ್ಯಕ್ಷರಾಗಿ ಹನುಮಂತಪ್ಪ ತಾಸಿ, ಉಪಾಧ್ಯಕ್ಷರಾಗಿ ಹನುಮೇಶನಾಯಕ .ಸದಸ್ಯರಾಗಿ ವೀರೇಶ,ಹನುಮೇಶ, ಲಿಂಗರಾಜಚಾಗಿ,ವೆಂಕಟೇಶ, ಬಾವಾಸಾಬ್,ಇಮಾಂಬಿಶರೀಫ್,ಯಲ್ಲಮ್ಮ ರಂಗನಾಥ, ನಾಮ ನಿರ್ದೇಶನ ಸದಸ್ಯರಾಗಿ ಗೂಳೆಪ್ಪ, ಹುಲಿಗೆಪ್ಪ, ಈರೇಶಬಾಣದ್, ತೋಟದರಾಯ ಕುಲಕರ್ಣಿ, ಭೀಮಣ್ಣ ನಾಯಕ ಅಯ್ಕೆಯಾಗಿದ್ದು ಶಾಲೆಯ ಪ್ರಭಾರಿ ಮುಖ್ಯಗುರು ಮಕ್ಬೂಲ್ ಅಹ್ಮದ್ ನೂತನ ಅಧ್ಯಕ್ಷರನ್ನು ಹಾಗೂ ಪದಾಧಿಕಾರಿಗಳನ್ನು ಅಭಿನಂದಿಸಿ ಶಾಲೆಯ ಅಭಿವೃದ್ದಿಗೆ ಹಾಗೂ ಮಕ್ಕಳ ಕಲಿಕೆಗೆ ಅಗತ್ಯವಿರುವ ಸೌಲಭ್ಯ ಕಲ್ಪಿಸುವುದಕ್ಕೆ ಅಗತ್ಯ ಸಹಕಾರ ನೀಡುವಂತೆ ಕೋರಿದರು.

ಶಾಲೆಯ ಶಿಕ್ಷಕರಾದ ಜಯಣ್ಣ,ಪ್ರಕಾಶ್, ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಪಾಲಕರು ಇದ್ದರು.

## ಮೊದಲನೇಯ ಪುಟದಿಂದ

# ರಾಯಚೂರ ಸಿಟಿಯಲ್ಲಿ ರೋಬೋಟಿಕ್ ಸ್ಕ್ಯಾವೆಂಜರ್ ಬಳಕೆಗೆ ಚಾಲನೆ

ಬ್ಯಾಂಡಿಕೂಟ್ ಕೇವಲ ಒಂದು ಯಂತ್ರವಲ್ಲ; ಇದು ಪ್ರಗತಿ, ಘನತೆ ಮತ್ತು ಸುರಕ್ಷತೆಯನ್ನು ಪ್ರತಿನಿಧಿಸುತ್ತದೆ. ಜವಾಬ್ದಾರಿಯುತ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ನೈರ್ಮಲ್ಯ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಭಾರತೀಯ ಡೀಪ್‌ಟೆಕ್ ಕಂಪನಿ ಜೆನ್‌ರೋಬೋಟಿಕ್ಸ್ ಅಭಿವೃದ್ಧಿಪಡಿಸಿದ ಬ್ಯಾಂಡಿಕೂಟ್ ಯಂತ್ರವು ಮಾರುಕಟ್ಟೆಯಲ್ಲಿ ಲಭ್ಯವಿರುವ ಅತ್ಯಂತ ಮುಂದುವರಿದ ಮತ್ತು ಪರಿಣಾಮಕಾರಿಯಾದ ಯಂತ್ರವಾಗಿದೆ. ಮಾನವ ಚಲನೆಯನ್ನು ಅನುಕರಿಸುವ ಈ ರೋಬೋಟಿಕ್ ಯಂತ್ರವು ತೋಳು ಬಳಸಿ ಮಾನವರಂತೆ ಕಾರ್ಯ ನಿರ್ವಹಿಸುತ್ತದೆ. ಮಾನವ ಪ್ರವೇಶವಿಲ್ಲದೆ ಮ್ಯಾನ್‌ಹೋಲ್‌ಗಳನ್ನು ನಿಖರವಾಗಿ ಮತ್ತು ಪರಿಣಾಮಕಾರಿಯಾಗಿ ಸ್ವಚ್ಛಗೊಳಿಸಲು ಅನುವು ಮಾಡಿಕೊಡುತ್ತದೆ. ಅಪಾಯಕಾರಿ ಅನಿಲಗಳನ್ನು ಪತ್ತೆಹಚ್ಚಲು ವಿಷಕಾರಿ ಅನಿಲ ಸಂವೇಧಕಗಳು ಮತ್ತು ಕಡಿಮೆ–ಬೆಳಕಿನ ಪರಿಸ್ಥಿತಿಗಳಲ್ಲಿ ಕಾರ್ಯಾಚರಣೆಗಳಿಗಾಗಿ ಮಹತ್ವದ ಕ್ಯಾಮೆರಾಗಳನ್ನು ಈ ರೋಬೋಟ್ ಹೊಂದಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಪ್ರಭಾರ ಅಧ್ಯಕ್ಷರಾದ ಸಾಜೀದ್ ಸಮೀರ್ ಹಾಗು ಪಾಲಿಕೆಯ ಸದಸ್ಯರು ಹಾಗೂ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿ, ಸಿಬ್ಬಂದಿ ಇದ್ದರು.

# ಸ್ವ–ಸಹಾಯ ಸಂಘದ ಸದಸ್ಯರು ಉತ್ತಮವಾಗಿ ಕಾರ್ಯನಿರ್ವಹಿಸಲಿ: ಸಾಜೀದ್ ಸಮೀರ್

ವಸೂಲಾತಿಯಲ್ಲಿ ತೊಡಗಿಸಿಕೊಳ್ಳುವ ಗುಂಪಿನ ಸದಸ್ಯರ ಹೆಸರು, ದೂರವಾಣಿ ಸಂಖ್ಯೆ ಇತ್ಯಾದಿ ವಿವರವನ್ನು ಲಿಖಿತ ರೂಪದಲ್ಲಿ ನಗರ ಸ್ಥಳೀಯ ಸಂಸ್ಥೆಯ ಕಂದಾಯ ಶಾಖೆಗೆ ಸಲ್ಲಿಸುವುದು. ಮಹಾನಗರಪಾಲಿಕೆಯ ಆಯೋಜಿಸಲಾಗುವ ಪ್ರಗತಿ ಪರಿಶೀಲನಾ ಸಭೆಗೆ ನಿಯಮಿತವಾಗಿ ಹಾಜರಾಗಬೇಕು ಎಂದರು.

ಕರ ವಸೂಲಾತಿಗೆ ತೊಡಗಿಸಿಕೊಳ್ಳುವ ಮಹಿಳಾ ಸ್ವ–ಸಹಾಯ ಗುಂಪಿನ ಸದಸ್ಯರು ಪ್ರೋತ್ಸಾಹಧನವನ್ನು ಹೊರತುಪಡಿಸಿ ಇತರೆ ಯಾವುದೇ ಭತ್ಯೆ ಸೇವೆ ಇತ್ಯಾದಿಗಳಿಗೆ ಅರ್ಹರಿರುವುದಿಲ್ಲ. ಬೇಡಿಕೆ ನೋಟಿಸ್ ನೀಡಿ ಆನ್‌ಲೈನ್ ಮೂಲಕ ವಸೂಲಾತಿ ಮಾಡುವುದು. ನಗದು ರೂಪದಲ್ಲಿ ವಸೂಲಾತಿ ಮಾಡಬಾರದು ಎಂದು ಸಂಬಂಧಿಸಿದ ಸದಸ್ಯರಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಆಡಳಿತ ಉಪ ಆಯುಕ್ತರಾದ ಸಂತೋಷ ರಾಣಿ, ಮಹಾನಗರ ಪಾಲಿಕೆ ಸಮುದಾಯ ಸಂಘಟನಾಧಿಕಾರಿ ಕೃಷ್ಣ ಕಟ್ಟಿಮನಿ ಸೇರಿದಂತೆ 14 ಸ್ವ–ಸಹಾಯ ಸಂಘದ 25 ಸದಸ್ಯರು ಇದ್ದರು. ಇದಕ್ಕೂ ಮುಂಚೆ ಸ್ವ–ಸಹಾಯ ಸಂಘದ ಸದಸ್ಯರಿಂದ ಅಧ್ಯಕ್ಷರಿಗೆ ಆಯುಕ್ತರಿಗೆ ಹಾಗೂ ಉಪ ಆಯುಕ್ತರಿಗೆ ಸನ್ಮಾನ ಮಾಡಲಾಯಿತು.

# ಧರ್ಮಸ್ಥಳದಲ್ಲಿ ಅಸಹಜ ಸಾವು ಪ್ರಕರಣದ ತನಿಖೆಗೆ 20 ಅಧಿಕಾರಿಗಳ ಎಸ್‌ಐಟಿ ರಚನೆ

ಅನಾಮಿಕ ವ್ಯಕ್ತಿಯೊಬ್ಬರು ಬೆಳ್ತಂಗಡಿ ನ್ಯಾಯಾಲಯದಲ್ಲಿ ನೀಡಿದ ದೂರಿನ ನಂತರ ರಾಜ್ಯ ಸರ್ಕಾರವು ಈ ಗಂಭೀರ ಪ್ರಕರಣದ ತನಿಖೆಗಾಗಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿದೆ. ಎಸ್‌ಐಟಿ ತಂಡ ಇದೀಗ ಧರ್ಮಸ್ಥಳದ ಪ್ರಕರಣ ಭೇದಿಸಲು ಸಿದ್ಧವಾಗಿದ್ದು, ಈ ತಂಡವು ಧರ್ಮಸ್ಥಳದಲ್ಲಿ 2003 ರಿಂದ 2013ರವರೆಗೆ ದಾಖಲಾಗಿರುವ ಆಸಹಜ ಸಾವುಗಳ ಬಗ್ಗೆ ತನಿಖೆಯನ್ನು ತೀವ್ರಗೊಳಿಸಿದೆ.ಜುಲೈ 2025ರಲ್ಲಿ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ದಾಖಲಾದ ಅಪರಾಧ ಕ್ರಮಾಂಕ 39/2025ರ ದೂರಿನಲ್ಲಿ ದೂರುದಾರನು ತಾನು ನೂರಾರು ಮೃತದೇಹಗಳನ್ನು ಧರ್ಮಸ್ಥಳದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ದಫನ ಮಾಡಿರುವುದಾಗಿ ಹೇಳಿಕೊಂಡಿದ್ದಾನೆ. ಈ ದೂರಿನ ಬೆನ್ನಲ್ಲೇ, ಬೆಳ್ತಂಗಡಿ ಪೊಲೀಸ್ ಠಾಣೆಯ ದಾಖಲೆಗಳಲ್ಲಿ 2003 ರಿಂದ 2013ರವರೆಗೆ ಆಸಹಜ ಸಾವುಗಳು, ಆತ್ಮಹತ್ಯೆ, ಆಕಸ್ಮಿಕ ಸಾವುಗಳು ಮತ್ತು ಕೊಲೆ ಆರೋಪಗಳಿಗೆ ಸಂಬಂಧಿಸಿದ ದಾಖಲೆಗಳಿರುವುದು ಬೆಳಕಿಗೆ ಬಂದಿದೆ. ಈ ದಾಖಲೆಗಳಲ್ಲಿ ಗುರುತು ಪತ್ತೆಯಾದ ಮತ್ತು ಗುರುತು ಪತ್ತೆಯಾಗದ (ಯುಡಿಆರ್ ಅನಾಥ ಶವ) ಮೃತದೇಹಗಳ ಬಗ್ಗೆ ಮಾಹಿತಿಯಿದೆ.ಹೀಗಿರುವಾಗ ಅನಾಥ ಶವಗಳ ದಫನ ಕಾರ್ಯವನ್ನು ಎಲ್ಲಿ, ಯಾವ ಜಾಗದಲ್ಲಿ ನಡೆಸಿತ್ತು ಎಂಬುದರ ಬಗ್ಗೆ ಪೊಲೀಸ್ ಇಲಾಖೆಯಲ್ಲಿ ಸ್ಪಷ್ಟ ದಾಖಲೆ ಇದ್ಯಾ? ಎಂಬ ಪ್ರಶ್ನೆ ಚರ್ಚೆಗೆ ಕಾರಣವಾಗಿದೆ. ದೂರುದಾರನ ಹೇಳಿಕೆಯ ಪ್ರಕಾರ, ಧರ್ಮಸ್ಥಳದ ಸ್ನಾನಘಟ್ಟ, ವಸತಿಗೃಹಗಳು ಮತ್ತು ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಈ ಶವಗಳನ್ನು ದಫನ ಮಾಡಲಾಗಿದೆ. ಈ ಆರೋಪಗಳನ್ನು ದೃಢೀಕರಿಸಲು ಎಸ್‌ಐಟಿ ತಂಡವು ಈಗ ಪೊಲೀಸ್ ದಾಖಲೆಗಳನ್ನು ಸಂಗ್ರಹಿಸುತ್ತಿದ್ದು, ಡಿಎ ಪರೀಕ್ಷೆ ಮತ್ತು ಸ್ಥಳ ಮಹಜರು ಸೇರಿದಂತೆ ತನಿಖೆಯನ್ನು ತೀವ್ರಗೊಳಿಸಿದೆ.16 ವರ್ಷಗಳಿಂದ ನಡೆದ ಸಾಮೂಹಿಕ ಅಂತ್ಯಕ್ರಿಯೆಗಳು, ಲೈಂಗಿಕ ಹಿಂಸೆ ಮತ್ತು ಮುಚ್ಚಿ ಹಾಕುವಿಕೆಯ ಆರೋಪಗಳು ಕರ್ನಾಟಕದ ದೇವಾಲಯ ಪಟ್ಟಣವಾದ ಧರ್ಮಸ್ಥಳದ ಮೇಲೆ ತೀವ್ರ ಟೀಕೆಗೆ ಗುರಿಯಾಗಿದ್ದವು. 1998 ಮತ್ತು 2014 ರ ನಡುವೆ ಮಹಿಳೆಯರು ಮತ್ತು ಅಪ್ರಾಪ್ತ ವಯಸ್ಕರ ಶವಗಳನ್ನು ಹೊಳಲು ಮತ್ತು ವಹನ ಮಾಡಲು ಒತ್ತಾಯಿಸಲಾಗಿದೆ ಎಂದು ಮಾಜಿ ನೈರ್ಮಲ್ಯ ಕಾರ್ಮಿಕರೊಬ್ಬರು ಆರೋಪಿಸಿದ ನಂತರ ಈ ಪ್ರಕರಣ ಬೆಳಕಿಗೆ ಬಂದಿದೆ.ಅವರ ದೂರಿನ ಮೇರೆಗೆ ಎಫ್‌ಐಆರ್ ದಾಖಲಿಸಲಾಗಿದೆ, ಸಾಕ್ಷಿಗಳಿಗೆ ರಕ್ಷಣೆ ನೀಡಲಾಯಿತು ಮತ್ತು ಅಸ್ಥಿಪಂಜರದ ಅವಶೇಷಗಳನ್ನು ನ್ಯಾಯಾಲಯದಲ್ಲಿ ಹಾಜರುಪಡಿಸಲಾಯಿತು. ಸಾರ್ವಜನಿಕರ ಆಕ್ರೋಶ, ಕಾನೂನು ಮಧ್ಯಸ್ಥಿಕೆಗಳು ಮತ್ತು 2003 ರಲ್ಲಿ ಮಹಿಳೆಯೊಬ್ಬರ ಕಣ್ಣರೆ ಬಗ್ಗೆ ದೂರು ಸೇರಿದಂತೆ ಹೆಚ್ಚಿನ ಆರೋಪಗಳ ನಂತರ, ಸರ್ಕಾರವು ಈ ವಿಷಯವನ್ನು ಕೂಲಂಕಷವಾಗಿ ತನಿಖೆ ಮಾಡಲು ಎಸ್ ಐಟಿಯನ್ನು ರಚಿಸಿದೆ.ಧರ್ಮಸ್ಥಳದಲ್ಲಿ ನಡೆದ ವ್ಯವಸ್ಥಿತ ಅಪರಾಧಗಳ ಕುರಿತಾದ ಸಂವೇದನಾಶೀಲ ಆರೋಪಗಳು ಬಹಳ ಹಿಂದಿನಿಂದಲೂ ಮರೆತುಹೋಗಿದ್ದ ಎರಡು ಪ್ರಕರಣಗಳನ್ನು ಪುನರುಜ್ಜೀವನಗೊಳಿಸಿವೆ. ರಾಜಕೀಯ ಮತ್ತು ಪೊಲೀಸ್ ಒತ್ತಡದಲ್ಲಿ ಹೂತುಹೋಗಿರುವ ತಮ್ಮ ಪ್ರಕರಣಗಳನ್ನು ಮತ್ತೆ ತೆರೆಯುವಂತೆ ಸಂತ್ರಸ್ಥ ಕುಟುಂಬಗಳು ಎಸ್ ಐಟಿಯನ್ನು ಒತ್ತಾಯಿಸಿವೆ.

# ಬಳ್ಳಾರಿ ಕೆಎಂಎಫ ಗೆ ರಾಘವೇಂದ್ರ ಹಿಟ್ನಾಳ ನಾಮನಿರ್ದೇಶನ: ಹುದುಗಿತಾ ಭೀಮನ ಬಲ

**ಬಳ್ಳಾರಿ, ಜು.23–** ಕಳೆದ ಕೆಲ ದಿನಗಳಿಂದ ನಡೆದ ಬೆಳವಣಿಗೆಗಳ ನಿರೀಕ್ಷೆಯಂತೆ ಕೊಪ್ಪಳದ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಅವರನ್ನು ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟಕ್ಕೆ ಸರ್ಕಾರ ನಿನ್ನೆ ನಾಮ ನಿರ್ದೇಶನ ಮಾಡುವ ಮೂಲಕ. ಮತ್ತೊಮ್ಮೆ ಈ ಕೆಎಂಎಫ್ ನ ಅಧ್ಯಕ್ಷರಾಗಲು ಬಯಸಿದ್ದ ಹಗರಿಬೊಮ್ಮನಹಳ್ಳಿಯ ಮಾಜಿ ಶಾಸಕ, ಕೆ.ಎಂ.ಎಫ್ ನ ಮಾಜಿ ಶಾಸಕ ಭೀಮಾನಾಯ್ಕ ಅವರ ಭೀಮ ಬಲ ಹುದುಗಿಸಿದಂತಾಗಿದೆ ಎನ್ನಬಹುದು.

ಕೆಎಂಎಫ್ ನಲ್ಲಿ 65 ಕ್ಕೂ ಹೆಚ್ಚು ಹುದ್ದೆಗಳ ನೇಮಕ, ಮೆಗಾ ಡೈರಿ ಸ್ಥಾಪನೆ ಮೊದಲಾದ ಕಾರಣಗಳಿಂದ ಈ ಬಾರಿ ಕೆಎಂಎಫ್ ನ ಅಧಿಕಾರ ಹಿಡಿಯಲು ಇನ್ನಿಲ್ಲದ ಪ್ರಯತ್ನ ಇತ್ತೀಚೆಗೆ ನಡೆದ ನಿರ್ದೇಶಕ ಚುನಾವಣೆಯಲ್ಲಿ ಕಸರತ್ತು ನಡೆದಿತ್ತು. ಮತ್ತೆ ಅಧ್ಯಕ್ಷರಾಗಲು ಬಯಸಿದ್ದ ಭೀಮಾನಾಯ್ಕ, ಮರಳು ಸಿದ್ದಪ್ಪ ಅವರ ಗುಂಪು ಮೂರು ಜಿಲ್ಲೆಗಳಲ್ಲಿ ತಮ್ಮದೇ ಗುಂಪು ಕಟ್ಟಿಕೊಂಡು ಕಣಕ್ಕೆ ಇಳಿದಿತ್ತು. ಅದಕ್ಕೆ ಬೇಕಾದಷ್ಟನ್ನು ಖರ್ಚು ಮಾಡಿಕೊಂಡಿದ್ದರು. ಈ ಬಾರಿ ಕೊಪ್ಪಳ ಜಿಲ್ಲೆಗೆ ಅಧಿಕಾರ ಬೇಕೆಂದು ಇವರ ವಿರುದ್ದದ ಗುಂಪು ಶಾಸಕ ರಾಘವೇಂದ್ರ ಹಿಟ್ನಾಳರ ನೇತೃತ್ವದಲ್ಲಿ ಚುನಾವಣೆ ಎದುರಿಸಿತ್ತು. ಚುನಾವಣೆಯಲ್ಲಿ 12 ಸ್ಥಾನಗಳ ಪೈಕಿ ಬಳ್ಳಾರಿ ಜಿಲ್ಲೆಯ ನಾಲ್ಕು ಮತ್ತು ರಾಯಚೂರು ಜಿಲ್ಲೆಯ ಎರೆಡು ಸ್ಥಾನಗಳನ್ನು ಇನ್ನಿಲ್ಲದ ಕಸರತ್ತು ಮಾಡಿ ಭೀಮಾನಾಯ್ಕ ಗುಂಪು ಗೆದ್ದಿತ್ತು. ಉಳಿದ ಆರು ಸ್ಥಾನಗಳನ್ನು ವಿರೋಧಿ ಗುಂಪು ಗೆದ್ದಿತ್ತು.ಗೆದ್ದ ತಕ್ಷಣ ಸುಮ್ಮನೇ ಇದ್ದರೆ ಭೀಮಾನಾಯ್ಕನ ಬಲ ಹುದುಗಿಸುವ ಪ್ರಯತ್ನ ನಡೆಯುತ್ತಿರಲಿಲ್ಲವೇನೋ. ಆದರೆ ಗೆದ್ದ ತಕ್ಷಣ ನಾನೇ ಮತ್ತೆ ಅಧ್ಯಕ್ಷ, ಅಷ್ಟೇ ಅಲ್ಲ, ಬಳ್ಳಾರಿಯಿಂದ ರಾಜ್ಯ ಕೆಎಂಎಫ್ ಗೆ ಡೆಲಿಗೇಷನ್ ಸಹ ನಾನೇ ತೆಗೆದುಕೊಂಡು ರಾಜ್ಯದ ಅಧ್ಯಕ್ಷನೂ ಸಹ ಆಗುತ್ತೇನೆ ಎಂದಿದ್ದು. ಡಿಕೆ ಸುರೇಶ್ ಸ್ಪರ್ಧೆ ಮಾಡುತ್ತಾರಂತೆ ಎಂಬ ಪ್ರಶ್ನೆಗೆ ಅದು ನನಗೆ ಗೊತ್ತಿಲ್ಲ, ಯಾರಾದರೂ ಸ್ಪರ್ಧಿಸಲಿ ನನ್ನ ಸ್ಪರ್ಧೆ ಖಚಿತ ಎಂದಿದ್ದರು.

ಇದರಿಂದ ಕುಪಿತಗೊಂಡ ಕೊಪ್ಪಳದ ಜನತೆ ಒಗ್ಗಟ್ಟಾಗಿ, ರಾಯಚೂರಿನ ನಿರ್ದೇಶಕರ ಬೆಂಬಲವೂ ಪಡೆದು, ರಾಘವೇಂದ್ರ ಹಿಟ್ನಾಳ್ ಅವರೊಂದಿಗೆ ಸಿಎಂ ಸಿದ್ದರಾಮಯ್ಯ ಬಳಿ ಹೋದಾಗಲೂ ಭೀಮಾನಾಯ್ಕ ತನ್ನ ಪಟ್ಟು ಸಡಿಲಿಸಿರಲಲ್ಲವಂತೆ. ಅದಕ್ಕಾಗಿ ಸವಾಲು ಸ್ವೀಕರಿಸಿದಂತೆ ಹಿಟ್ನಾಳ್ ಅವರು ಈ ಮೊದಲು ನಾಮನಿರ್ದೇಶನ ಮಾಡಿಸಿದ್ದ ತಮ್ಮದೇ ಜಿಲ್ಲೆಯ ಹಂಪಯ್ಯ ಸ್ವಾಮಿ ಅವರನ್ನು ರಾಜ್ಯಕ್ಕೆ ನಾಮನಿರ್ದೇಶನ ಮಾಡಿಸಿ. ಇಲ್ಲಿ ತಾವು ನಾಮ ನಿರ್ದೇಶನಗೊಂಡಿದ್ದಾರೆ. ಈ ಮೂಲಕ ಭೀಮಾನಾಯ್ಕ ಅವರಿಗೆ ಮೊದಲ ಪೆಟ್ಟು ನೀಡಿದ್ದಾರೆ. ಇನ್ನು ಹಿಟ್ನಾಳ್ ಅವರು ತಮ್ಮ ಜಿಲ್ಲೆಯಿಂದ ಆಯ್ಕೆಯಾದ ನಿರ್ದೇಶಕರನ್ನು ಅಧ್ಯಕ್ಷರನ್ನಾಗಿ ಮಾಡುತ್ತಾರೋ ಇಲ್ಲವೇ ತಾವೇ ಅಧ್ಯಕ್ಷರಾಗುತ್ತಾರೋ ಕಾದು ನೋಡಬೇಕಿದೆ. ಬಲ್ಲ ಮೂಲಗಳು ಅವರೇ ಅಧ್ಯಕ್ಷರಾಗುತ್ತಾರಂತೆ. ಆ ಮೂಲಕ ಭೀಮಾನಾಯ್ಕ ಅವರಿಗೆ ಎರಡನೇ ಪೆಟ್ಟು ನೀಡಲಿದ್ದಾರಂತೆ.ಮೂರನೆಯದಾಗಿ ಬೆಂಗಳೂರು ಕೆಎಂಎಫ್ ಗೆ ರಾಯಚೂರಿನವರನ್ನು ಡೆಲಿಗೇಷನ್ ಕಳಿಸಲಿದ್ದಾರಂತೆ. ನಾಲ್ಕನೆಯದಾಗಿ ಖಾಲಿ ಇರುವ ಹುದ್ದೆಗಳನ್ನು ನೇಮಕ ಮಾಡುವ ಮೂಲಕ. ಈ ಹಿಂದೆ ಭೀಮಾನಾಯ್ಕ ಮಾಡಿದ ಪ್ರಯತ್ನಕ್ಕೆ ಕೊಡಲಿ ಪೆಟ್ಟು ನೀಡಲಿದ್ದಾರಂತೆ.ಏನೇ ಆಗಲಿ ಜುಲೈ 25 ರಂದು ನಡೆಯುವ ಅಧ್ಯಕ್ಷ– ಉಪಾಧ್ಯಕ್ಷ ಸ್ಥಾನದ ಚುನಾವಣೆ ನಂತರ ಕೂಡ್ಲಿಗಿ ಭಾಗದಿಂದ ಬರುತ್ತಿದ್ದ ಕಳಪೆ ಗುಣಮಟ್ಟದ ಹಾಲಿನ ಸರಬರಾಜು ಸ್ಥಗಿತ ಸೇರಿದಂತೆ ಅನೇಕ ಬೆಳವಣಿಗೆಗಳು ಆಗಲಿವೆ ಎಂದು ಹೇಳಲಾಗುತ್ತಿದೆ. ಎಲ್ಲವುದನ್ನೂ ಕಾದು ನೋಡಬೇಕಿದೆ.

# ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಹಿಂದುಳಿವಿಕೆಪತ್ತೆಗೆ ಮೌಲ್ಯಮಾಪನ ನಡೆಸಲಾಗುವುದು:ಬಿ.ಆರ್.ಪಾಟೀಲ



**ಕಲಬುರಗಿ,ಜು.23–** ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ರಾಜ್ಯದಲ್ಲಿಯೇ ಅತ್ಯಂತ ಹಿಂದುಳಿದಿದ್ದು, ಹಿಂದುಳಿವಿಕೆ ಪತ್ತೆಗೆ ಮೌಲ್ಯಮಾಪನ ನಡೆಸುವಂತೆ ಮುಖ್ಯಮಂತ್ರಿಗಳಿಗೆ ಕೋರ ಲಾಗುವುದು ಎಂದು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ ಹೇಳಿದರು.

ಮಂಗಳವಾರ ಇಲ್ಲಿನ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳ ಪ್ರಗತಿ ಪರಿಶೀಲನಾ ಸಭೆ ನಂತರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಳೆದ 20 ವರ್ಷದಿಂದ ಮೌಲ್ಯಮಾಪನ ನಡೆದಿಲ್ಲ ಎಂದರು.

ರಾಜ್ಯದಲ್ಲಿ ಸುಸ್ಥಿರ ಅಭಿವೃದ್ಧಿ ನಿಟ್ಟಿನಲ್ಲಿ ಇದೇ ಪ್ರಥಮ ಬಾರಿಗೆ ಜಿಲ್ಲಾ ಹಂತದಲ್ಲಿ ಯೋಜನಾ ಆಯೋಗದಿಂದ ವಿವಿಧ ಇಲಾಖೆಗಳ ಪರಸ್ಪರ ಸಮಾಲೋಚನೆ ಸಭೆ ಕರೆಯಲಾಗಿದೆ. ಕೃಷಿಯಿಂದ ಜನ ವಿಮುಖವಾಗುತ್ತಿದ್ದಾರೆ. ಕೃಷಿ ಪ್ರಧಾನ ವ್ಯವಸ್ಥೆ ನಮ್ಮದಾಗಿದ್ದು, ಇದನ್ನು ಪ್ರೋತ್ಸಾಹಿಸಲು ಕೃಷಿಕಗೆ ಪೂರಕವಾದ ಹೈನುಗಾರಿಕೆ, ತೋಟಗಾರಿಕೆ ಹಾಗೂ ಇತರೆ ಉಪ ಕಸುಬುಗಳನ್ನು ಮಾಡುವತ್ತ ಪ್ರೇರೇಪಿಸುವ ಕೆಲಸಗಳಾಗಬೇಕು ಎಂದರು.

ಕಲುಷಿತ ನೀರಿನ ಸೇವನೆಯಿಂದಲೆ ಬಹುತೇಕ ರೋಗಗಳಿಗೆ ಆಹ್ವಾನಿಸಿದಂತಿದೆ. ಹೀಗಾಗಿ ಶುದ್ಧ ಕುಡಿಯುವ ನೀರು ಪೂರೈಕೆಯ ಆದ್ಯತೆ ನಮ್ಮದಾಗಬೇಕಿದೆ. ವಾಟರ್ ಶೆಡ್ ನಿರ್ಮಾಣ ಹೆಚ್ಚುಗೊಳಿಸಿ ಅಂತರ್ಜಲ ಹೆಚ್ಚಿಸುವ ಕೆಲಸ ಮಾಡಬೇಕು. ನಿರಿಲ್ಲದೆ ಯಾವುದೇ ಯೋಜನೆ ಸಾಕಾರವಾ ಗುವುದಿಲ್ಲ ಎಂದರು.

**ಯೋಜನಾ ಸಮಿತಿಗೆ ಚುನಾವಣೆ ನಡೆಸಿ:** ಪಂಚಾಯತ್ ರಾಜ್ ವ್ಯವಸ್ಥೆಗೆ 73–74ರ ತಿದ್ದುಪಡಿ ತಂದು ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ಸಮಿತಿ ಸಭೆ ರಚಿಸಲಾಗಿದ್ದರು ಅದು ರಾಜ್ಯದಲ್ಲಿ ಸಕ್ರಿಯವಾಗಿ ಸಭೆ ನಡೆಸುತ್ತಿಲ್ಲ. ಪರಿಣಾಮ ಜಿಲ್ಲೆಗಳಲ್ಲಿ ಸುಸ್ಥಿರ ಅಭಿವೃದ್ಧಿಗೆ ಪೂರಕ ಯೋಜನೆಗಳು ರೂಪಗೊಳ್ಳುತ್ತಿಲ್ಲ. ಇನ್ನು ಕೆಲವೆಡೆ ಯೋಜನಾ ಸಮಿತಿಗಳಿಗೆ ಚುನಾವಣೆಯೇ ನಡೆದಿಲ್ಲ. ಕೂಡಲೆ ಸಂವಿಧಾನಬದ್ಧ ಸಂಸ್ಥೆಗೆ ಚುನಾವಣೆ ನಡೆಸಬೇಕು. ಚುನಾವಣಾ ನಡೆಯದ ಕಡೆ ಜಿಲ್ಲಾ ಉಸ್ತುವಾರಿ ಸಚಿವರು ಸಭೆ ಕರೆಯಬೇಕು ಎಂದು ಬಿ.ಆರ್. ಪಾಟೀಲ ತಿಳಿಸಿದರು.

# ರೈತ ಸಂಘದ ಗ್ರಾಮ ಘಟಕಕ್ಕೆ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ



**ಕೊಟ್ಟೂರು, ಜು.23–** ಪಟ್ಟಣದ ಶ್ರೀ ಗುರು ಮರಿಕೊಟ್ಟೂರೇಶ್ವರ ದೇವಸ್ಥಾನದ ಆವರಣದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಉಪಾಧ್ಯಕ್ಷ ಎನ್ ಭರ್ಮಣ್ಣ ನೇತೃತ್ವದಲ್ಲಿ ತಾಲೂಕಿನ ಸುಂಕದಕಲ್ಲು ಗ್ರಾಮದ ರೈತರಿಗೆ ಹಸಿರು ಶಾಲು ಹಾಕುವುದರ ಮೂಲಕ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘಟನೆಯ ಸುಂಕದಕಲ್ಲು ನೂತನ ಗ್ರಾಮ ಘಟಕ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಸಲಾಯಿತು.

ಗ್ರಾಮ ಘಟಕದ ನೂತನ ಅಧ್ಯಕ್ಷರಾಗಿ ಹೆಚ್. ಚೆನ್ನಬಸಪ್ಪ, ಉಪಾಧ್ಯಕ್ಷರಾಗಿ ಜಿ. ಮೂಗಣ್ಣ ಮತ್ತು ಹೆಚ್ ಬಸವರಾಜ, ಪ್ರಧಾನ ಕಾರ್ಯದರ್ಶಿಯಾಗಿ ಕೆ ಹೊನ್ನೂರಪ್ಪ, ಕಾರ್ಯದರ್ಶಿ ಹೆಚ್ ರಮೇಶ್, ಖಜಾಂಚಿ ಹೆಚ್ ಕರಿಬಸಪ್ಪ, ಖಜಾಂಚಿ ಜಿ ಜಗದೀಶ್, ಸಂಚಾಲಕರಾಗಿ ಬಿ ಸುಬ್ರಹ್ಮಣ್ಯ, ನಾಗರಾಜ ಇವರಗಳ ಪಧಾದಿಕಾರಿಗಳಾಗಿ ಅಯ್ಕೆಯಾದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಎನ್. ಭರ್ಮಣ್ಣ ಮಾತನಾಡಿ, ಯಾವುದೇ ರಾಜಕೀಯ ಪಕ್ಷಗಳ ಪರ ನಿಲ್ಲುವುದು ನಮ್ಮ ಸಂಘಟನೆಯಲ್ಲಿ ಇಲ್ಲಾ ನಮ್ಮ ಸಂಘಟನೆ ಯಾವುದೇ ರೈತ ಸಂಕಷ್ಟದಲ್ಲಿ ಸಿಲುಕಿಕೊಂಡಿರುವ ರೈತರ ಪರ ಹೋರಾಡಿ ಅವರಿಗೆ ನ್ಯಾಯ ಕೊಡಿಸುವುದರಲ್ಲಿ ನಮ್ಮ ಸಂಘಟನೆ ಮುಂದಾಗುತ್ತದೆ.

ಹಾಗಾಗಿ ನೀವುಗಳು ನಮ್ಮ ಸಂಘಟನೆ ಬಳಸಿಕೊಂಡು ಯಾವುದೇ ರಾಜಕೀಯ ಪಕ್ಷಗಳ ಪರ ನಿಲ್ಲಬೇಡಿ, ನಿಮ್ಮ ಗ್ರಾಮದ ನೊಂದ ರೈತರಿಗೆ ಇಲಾಖೆ ಅದಿಕಾರಿಗಳಿಂದ ಅನ್ಯಾಯಗಳು ನಡೆಯುತ್ತಿದ್ದರೆ ಅಂತ ಇಲಾಖೆ ಅಧಿಕಾರಿಗಳ ವಿರುದ್ಧ ಹೆದರದೆ ಧೈರ್ಯವಾಗಿ ಮುನ್ನುಗ್ಗಿ ನಿಮ್ಮ ಜೊತೆಗೆ ಸದಾ ನಾವು ಇರುತ್ತೇವೆ ನೊಂದ ರೈತರಿಗೆ ನ್ಯಾಯ ಕೊಡಿಸುವುದರಲ್ಲಿ ಮುಂದಾಗಿ ಅವರಿಗೆ ನ್ಯಾಯ ಕೊಡಿಸಬೇಕು

ಯಾವುದೇ ಇಲಾಖೆ ಅಧಿಕಾರಿಗಳು ನಿಮ್ಮ ಗ್ರಾಮದ ರೈತರಿಗೆ ನ್ಯಾಯ ಕೊಡುವುದರಲ್ಲಿ ಹಿಂದೇಟು ಹಾಕಿದರೆ ನಮ್ಮ ಗಮನಕ್ಕೆ ತಿಳಿಸಿ ಸದಾ ನಮ್ಮ ಸಂಘಟನೆ ಧೈರ್ಯವಾಗಿ ನೊಂದ ರೈತರ ಪರ ಹೋರಾಟಕ್ಕೆ ಇಳಿದು ರೈತರಿಗೆ ನ್ಯಾಯ ಕೊಡಿಸಲು ಬೆಂಬಲವಾಗಿ ನಿಲ್ಲುತ್ತದೆ ಎಂದು ತಿಳಿಸಿದರು,

# ವಿದ್ಯಾರ್ಥಿಗಳು ಶಿಕ್ಷಣ ಜತೆಗೆ ಸಂಸ್ಕಾರ ಕಲಿಯಿರಿ: ಡಾ.ಚಂದ್ರಶೇಖರ್ ಪಾಟೀಲ




**ಹುಮನಾಬಾದ್,ಜು.23–**ಉಪನ್ಯಾಸಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜತೆಗೆ ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಬೇಕು, ಅದೆ ರೀತಿ ವಿದ್ಯಾರ್ಥಿಗಳು ಕುಡ ಶಿಕ್ಷಣ ಜತೆಗೆ ಸಂಸ್ಕಾರ ಕಲಿಯಬೇಕು ಎಂದು ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ಹೇಳಿದರು.

ಸಮೀಪದ ಸಿಂಧನಕೇರಾ ಕ್ರಾಸ್ ಹತ್ತಿರದಲ್ಲಿರುವ ಎಚ್‌ಕೆಡಿಇಟಿ ಶಿಕ್ಷಣ ಟ್ರಸ್ಟ ಅಡಿಯಲ್ಲಿ ನಡೆಯುತ್ತಿರುವ ಶಕುಂತಲಾ ಪಾಟೀಲ ಪಿಯುಸಿ ವಿಜ್ಞಾನ ಕಾಲೇಜಿನಲ್ಲಿ ಈಚೆಗೆ ಆಯೋಜಿಸಿದ ಪಿ.ಯು.ಸಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದರೊಂದಿಗೆ ಮಕ್ಕಳಲ್ಲಿ ವೈಜ್ಞಾನಿಕ, ದೇಶಾಭಿಮಾನ, ರಾಷ್ಟ್ರೀಯ ಭಾವೈಕೆತೆಯ ಮನೋಭಾವ ಬೆಳೆಸಬೇಕು. ಮಕ್ಕಳು ಕ್ರೀಡೆ, ಸಾಹಿತ್ಯ, ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸುವುದರೊಂದಿಗೆ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು, ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿ ನಿಮ್ಮ ತಂದೆ, ತಾಯಿ ಮತ್ತು ಕಾಲೇಜಿನ ಕೀರ್ತಿ ಹೆಚ್ಚಿಸಬೇಕು ಎಂದ ಅವರು ವಿದ್ಯಾರ್ಥಿಗಳು ಗುರು, ಹಿರಿಯರನ್ನು ಗೌರವ ದಿಂದ ಕಾಣುವುದರ ಜತೆಗೆ ಗುಣಮಟ್ಟದ ಶಿಕ್ಷಣ ಕಲಿತು ದೇ ಶದ ಒಬ್ಬ ಒಳ್ಳೆಯ ಪ್ರಜೆಯಾಗಿ ಬಾಳಬೇಕು, ಎಂದು ಕರೆ ನೀಡಿದರು.

ಹಿರೇಮಠ ಸಂಸ್ಥಾನದ ರೇಣುಕ ವೀರಗಂಗಾಧರ ಶಿವಾಚಾರ್ಯ ಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಉಪನ್ಯಾಸಕ ಸುಭಾಷ ಪುಜಾರಿ ಪ್ರಾಸ್ತವಿಕ ಮಾತನಾಡಿದರು. ಈ ಸಂದರ್ಭದಲ್ಲಿ ರಾಜರಾಜೇಶ್ವರಿ ಆಯುರ್ವೇಧಿಕ ಮೇಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಬ್ರಿಜೇಶ್, ಬಸವರಾಜ ಪಾಟೀಲ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲ ನಾಗರಾಜ, ವಸತಿ ಶಾಲೆ ಪ್ರಾಂಶುಪಾಲರಾದ ಮಂಜುನಾಥ ಕುಲಕರ್ಣಿ, ಪ್ರಾಂಶುಪಾಲ ಸದಾನಂದ ಪತ್ರಿ, ಪಿ.ಯು ಕಾಲೇಜಿನ ಪ್ರಾಂಶುಪಾಲರಾದ ವಿನಾ ಯಕ ಬಾರದ, ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111 9743496111

# ಖಜಾನೆ ಖಾಲಿಯಾಗಿದ್ದಕ್ಕೆ ರಾಜ್ಯ ಸರ್ಕಾರ ಸಣ್ಣಪುಟ್ಟ ವ್ಯಾಪಾರಿಗಳಿಂದ ಸುಲಿಗೆ ಮಾಡುತ್ತಿದೆ : ವಿ.ಸೋಮಣ್ಣ

**ತುಮಕೂರು,ಜು.23–** ರಾಜ್ಯದ ಖಜಾನೆ ಖಾಲಿಯಾಗಿದೆ, ಹಣಕ್ಕಾಗಿ ರಾಜ್ಯ ಸರ್ಕಾರ ಎಲ್ಲೆಲ್ಲಿ, ಯಾವ ರೀತಿಯಲ್ಲಿ ಜನರನ್ನು ಶೋಷಣೆ ಮಾಡುತ್ತಿದೆ ಎಂಬುದು ಎಲ್ಲರಿಗೂ ಗೊತ್ತು. ಇತ್ತೀಚೆಗೆ ಸಣ್ಣಪುಟ್ಟ ವ್ಯಾಪಾರಿಗಳಿಂದ ತೆರಿಗೆ ಹಣ ವಸೂಲಿ ಮಾಡುತ್ತಾ ಬಡ ವ್ಯಾಪಾರಿಗಳನ್ನು ಶೋಷಣೆ ಮಾಡುತ್ತಿದೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಟೀಕಿಸಿದರು.

ಸಿದ್ದಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಅವರ 63ನೇ ಜನ್ಮದಿನದ ಅಂಗವಾಗಿ ಸಚಿವ ಸೋಮಣ್ಣ, ಪತ್ನಿ ಶೈಲಜಾ ಸೋಮಣ್ಣ ಅವರು ಮಠಕ್ಕೆ ಆಗಮಿಸಿ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರ ಗದ್ದುಗೆಗೆ ಪೂಜೆ ಸಲ್ಲಿಸಿ ನಂತರ ಶ್ರೀ ಸಿದ್ಧಲಿಂಗ ಸ್ವಾಮೀಜಿ ಅವರ ಆಶೀರ್ವಾದ ಪಡೆದರು.

ಬಳಿಕ ಪರಿಸ್ಥಿತಿ ಪತ್ರಕರ್ತರೊಂದಿಗೆ ಮಾತನಾಡಿದ ಏನಾಗಿದೆ ಎಂಬುದು ಗೊತ್ತು. ಅವರು, ಮುಖ್ಯಮಂತ್ರಿ ಕೇಂದ್ರ ಬಾಕಿ ತೆರಿಗೆ ಸಿದ್ದರಾಮಯ್ಯ ಅವರ ಹಣ ನೀಡುತ್ತಿಲ್ಲ ಎಂದು ಪದೇ ಪದೇ ಹೇಳಿಕೆ ನೀಡುತ್ತಿರುವುದು ಸರಿಯಲ್ಲ, ಯಾವುದನ್ನು ಎಲ್ಲಿ ಮಾತನಾಡಬೇಕೋ ಅಲ್ಲಿ ಮಾತನಾಡಬೇಕು ಎಂಬುದನ್ನು ಅವರು ತಿಳಿಯಬೇಕು. ಜಿಎಸ್‌ಟಿ ಸಭೆ, ಪ್ರಧಾನ ಮಂತ್ರಿಗಳ ಸಭೆಯಲ್ಲಿ ಭಾಗವಹಿಸುವ ಸೌಜನ್ಯ ಸಿದ್ದರಾಮಯ್ಯನವರಿಗಿಲ್ಲ. ಆದರೆ ಪ್ರಧಾನಿ ಬಗ್ಗೆ ಲಘುವಾಗಿ ಮಾತನಾಡುವುದು ಏಳು ಕೋಟಿ ಜನರ ಪ್ರತಿನಿಧಿಯಾಗಿ, ಮುಖ್ಯಮಂತ್ರಿಯಾಗಿರುವ ಅವರಿಗೆ ಶೋಭೆ ತರುವುದಿಲ್ಲ. ಸಿದ್ದರಾಮಯ್ಯ ತಮ್ಮ ವರ್ತನೆ ಬದಲು ಮಾಡಿಕೊಳ್ಳಲಿ ಎಂದರು.

ಸಂಸತ್ ಅಧಿವೇಶನದಲ್ಲಿ ಪ್ರಶೋತ್ತರ ಅವಧಿ ನಂತರ ಚರ್ಚೆ ಮಾಡಲು ಅವಕಾಶವಿದೆ. ನಂತರ ಆಪರೇಷನ್ ಸಿಂಧೂರ ವಿಚಾರ ಚರ್ಚೆ ಮಾಡೋಣ ಎಂದು ಸಭಾಪತಿಗಳು ಹೇಳಿದರೂ ಕಾಂಗ್ರೆಸ್‌ನವರು ಅನಾವಶ್ಯಕವಾಗಿ ಗೊಂದಲ ಮಾಡಿರುವುದು ಸರಿಯಲ್ಲ ಎಂದು ಟೀಕಿಸಿದರು.

ಸಿದ್ದಗಂಗಾ ಮಠ ಸೇರಿದಂತೆ ಮಠಮಾನ್ಯಗಳು ಸಮಾಜ ಸೇವಾಕಾರ್ಯ ಮಾಡುತ್ತಿವೆ. ಎಲ್ಲಾ ಜಾತಿ, ವರ್ಗದ ಬಡ, ಕಡು ಬಡವರ ಮಕ್ಕಳಿಗೆ ವಿದ್ಯೆ ದಾನ, ಅನ್ನದಾಸೋಹ ಮಾಡಿ ಆ ಮಕ್ಕಳೂ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂಬ



ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರ ಸಂಕಲ್ಪವನ್ನು ಶ್ರೀ ಸಿದ್ದಲಿಂಗ ಸ್ವಾಮೀಜಿಗಳು ಮುಂದುವರೆಸಿದ್ದಾರೆ ಎಂದು ಸೋಮಣ್ಣ ಹೇಳಿದರು.

ಮುಖಂಡರಾದ ಎಸ್.ಶಿವಪ್ರಸಾದ್, ವೈ.ಹೆಚ್.ಹುಚ್ಚಯ್ಯ, ಡಾ.ಎಸ್.ಪರಮೇಶ್, ಬಿ.ಬಿ.ಮಹದೇವಯ್ಯ, ಹಕ್ಕೊತ್ತಾಯ ಬಸವರಾಜು, ಸಾಗರನಹಳ್ಳಿ ವಿಜಯ್ ಕುಮಾರ್, ರುದ್ರೇಶ್, ಭೈರಣ್ಣ, ಸತ್ಯಮಂಗಲ ಜಗದೀಶ್, ಧನುಷ್, ತರಕಾರಿ ಮಹೇಶ್, ವಿರೂಪಾಕ್ಷಪ್ಪ, ಕೊಪ್ಪಲ್ ನಾಗರಾಜ್, ಗಣೇಶ್ ಪ್ರಸಾದ್, ಯಶಸ್, ಸಂತೋಷ್ ಮತ್ತಿತರರು ಈ ಸಂದರ್ಭದಲ್ಲಿ ಪಾಲ್ಗೊಂಡಿದ್ದರು.

# ತಿಮ್ಮಪ್ಪನ ದರ್ಶನ ಟಿಕೆಟ್ ವಿಳಂಬ ತಪ್ಪಿಸಲು ಹೊಸ ಶ್ರೀವಾಣಿ ಕೌಂಟರ್

**ಜು.23–** ತಿಮಪ್ಪನ ದರ್ಶನಕ್ಕೆ ತಿರುಪತಿಯಲ್ಲಿ ಹೊಸ ಶ್ರೀವಾಣಿ ದರ್ಶನ ಟಿಕೆಟ್ ಕೇಂದ್ರವನ್ನು ಪ್ರಾರಂಭಿಸಲಾಗಿದೆ. ಭಕ್ತರಿಗೆ ಟಿಕೆಟ್ ನೀಡುವ ಪ್ರಕ್ರಿಯೆಯನ್ನು ಸುಗಮಗೊಳಿಸುವ ಗುರಿಯೊಂದಿಗೆ ಈ ಹೊಸ ವ್ಯವಸ್ಥೆ ಆರಂಭಿಸಲಾಗಿದೆ.

ತಿರುಮಲ ಅನ್ನಮಯ್ಯ ಭವನದ ಎದುರು ಇರುವ ಈ ಹೊಸ ಸೌಲಭ್ಯವನ್ನು ಟಿಟಿಡಿ ಅಧ್ಯಕ್ಷ ಬಿ.ಆರ್. ನಾಯ್ಡು ಮತ್ತು ಕಾರ್ಯನಿರ್ವಾಹಕ ಅಧಿಕಾರಿ ಜೆ. ಶ್ಯಾಮಲಾ ರಾವ್ ಉದ್ಘಾಟಿಸಿದರು.ಶ್ರೀವಾಣಿ ದರ್ಶನ ಟಿಕೆಟ್‌ಗಳನ್ನು ಪಡೆಯಲು ಭಕ್ತರು ಬೆಳಿಗ್ಗೆ 5:00 ಗಂಟೆಯಿಂದ ಕಾಯುವ ಉದ್ದನೆಯ ಸರತಿ ಸಾಲುಗಳ ಬಗ್ಗೆ ದೀರ್ಘ ಕಾಲದ ದೂರುಗಳನ್ನು ಈ ಕೇಂದ್ರವು ಪರಿಹರಿಸುತ್ತದೆ.ಭಕ್ತರು ಮುಂಜಾನೆಯಿಂದಲೇ ದೀರ್ಘ ಕಾಯುವಿಕೆಯನ್ನು ಎದುರಿಸುತ್ತಿದ್ದಾರೆ ಎಂದು ನಾಯ್ಡು ಉದ್ಘಾಟನಾ ಸಮಾರಂಭದಲ್ಲಿ ಹೇಳಿದರು.

ಸುಧಾರಿತ ಮೂಲಸೌಕರ್ಯದೊಂದಿಗೆ ರೂ. 60 ಲಕ್ಷ ರೂ ವೆಚ್ಚದಲ್ಲಿ ನಿರ್ಮಿಸಲಾದ ಈ ಹೊಸ ಕೌಂಟರ್‌ಗಳು



ಟಿಕೆಟ್‌ಗಳನ್ನು ವೇಗವಾಗಿ ಮತ್ತು ಸುಲಭವಾಗಿಸುತ್ತದೆ ಎಂದು ಅವರು ಹೇಳಿದರು.

ಟಿಟಿಡಿ ಪ್ರಮುಖ ಉಪಕ್ರಮವಾದ ಶ್ರೀವಾಣಿ ಟ್ರಸ್ಟ್, ವಿಶೇಷ ಪ್ರವೇಶ ದರ್ಶನಕ್ಕೆ ಬದಲಾಗಿ ಭಕ್ತರು ದೇವಾಲಯದ ಯೋಜನೆಗಳಿಗೆ ಕೊಡುಗೆ ನೀಡಲು ಅವಕಾಶ ನೀಡುತ್ತದೆ.ಈ ಟಿಕೆಟ್‌ಗಳಿಗೆ ಹೆಚ್ಚಿನ ಬೇಡಿಕೆ ಹೆಚ್ಚಾಗಿ ಗಮನಾರ್ಹ ವಿಳಂಬಕ್ಕೆ ಕಾರಣವಾಗಿದೆ, ಹೊಸ ಕೇಂದ್ರವು ಅದರ ಪರಿಣಾಮಕಾರಿ ಸ್ಥಾಪನೆಯೊಂದಿಗೆ ಇದನ್ನು ಕಡಿಮೆ ಮಾಡುವ ನಿರೀಕ್ಷೆಯಿದೆ.

ಹೈ–ಲೆವೆಲ್ ಕಾಟೇಜ್‌ಗಳು ಮತ್ತು ಅನ್ನಪ್ರಸಾದಂ ಕಾಂಪ್ಲೆಕ್ಸ್ ಪ್ರದೇಶಗಳಲ್ಲಿ ನವೀಕರಿಸಿದ ಉಪ–ವಿಚಾರಣಾ ಕಚೇರಿಗಳನ್ನು ನಾಯ್ಡು ಉದ್ಘಾಟಿಸಿದರು. ಈ ಆಧುನೀಕರಿಸಿದ ಸೌಲಭ್ಯಗಳು ಉತ್ತಮ ಮಾಹಿತಿ ಮತ್ತು ಸಹಾಯ ಸೇವೆಗಳೊಂದಿಗೆ ಭಕ್ತರ ಬೆಂಬಲವನ್ನು ಸುಧಾರಿಸುವ ಗುರಿಯನ್ನು ಹೊಂದಿವೆ. ಯಾತ್ರಿಕರ ಅಗತ್ಯಗಳನ್ನು ಪೂರೈಸುವುದನ್ನು ಖಚಿತಪಡಿಸಿಕೊಳ್ಳಲು ನಾಯ್ಡು ಅವರು ಸೆಟಪ್‌ಗಳನ್ನು ಸಹ ಪರಿಶೀಲಿಸಿದರು.

# ಸಣ್ಣ ವ್ಯಾಪಾರಿಗಳಿಗೆ ಜಿಎಸ್‌ಟಿ ನೋಟಿಸ್ ಸರ್ಕಾರವೇ ಹೊಣೆ

**ಬೆಂಗಳೂರು, ಜು. 23–** ಸಣ್ಣ ವ್ಯಾಪಾರಿಗಳಿಗೆ ಜಿಎಸ್‌ಟಿ ನೋಟಿಸ್ ವಿಚಾರ ಆಡಳಿತ ರೂಢ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ಆರೋಪ–ಪ್ರತ್ಯಾರೋಪಗಳಿಗೆ ಕಾರಣವಾಗಿರುವಾಗಲೇ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸಣ್ಣ ವ್ಯಾಪಾರಿಗಳಿಗೆ ಜಿಎಸ್‌ಟಿ ನೋಟಿಸ್ ನೀಡಿರುವುದಕ್ಕೆ ರಾಜ್ಯ ಸರ್ಕಾರವೇ ಕಾರಣ. ಬರಿದಾಗಿರುವ ಖಜಾನೆಯನ್ನು ತುಂಬಿಕೊಳ್ಳಲು ಈ ರೀತಿ ಮಾಡಿದೆ ಎಂದು ದೂರಿದ್ದು, ಸಣ್ಣ ವ್ಯಾಪಾರಿಗಳ ಹೋರಾಟಕ್ಕೆ ಬಿಜೆಪಿಯ ಸಂಪೂರ್ಣ ಬೆಂಬಲ ಇದೆ ಎಂದಿದ್ದಾರೆ.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೀದಿ ಬದಿ ವ್ಯಾಪಾರಿಗಳು, ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರಿಗಳಿಗೆ ರಾಜ್ಯದ ವಾಣಿಜ್ಯ ತೆರಿಗೆ ಇಲಾಖೆ ನೀಡಿರುವ ನೋಟಿಸ್ ಸಂಪೂರ್ಣ ಅಕ್ರಮವಾಗಿದೆ. ತಕ್ಷಣ ಈ ನೋಟಿಸ್‌ಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಹಾಲು ಮತ್ತಿತರ ಕೆಲವು ವಸ್ತುಗಳು ಜಿಎಸ್‌ಟಿ ವ್ಯಾಪ್ತಿಗೆ ಬರುವುದಿಲ್ಲ. ಅಂತಹ ವಸ್ತುಗಳ ಮಾರಾಟಗಾರರಿಗೂ ನೋಟಿಸ್ ಕೊಟ್ಟಿದ್ದಾರೆ. ಖಜಾನೆ ಖಾಲಿಯಾಗಿದೆ ಎಂಬ ಕಾರಣಕ್ಕೆ ಯಾವುದನ್ನೂ ಪರಿಶೀಲಿಸದೆ ರಾತ್ರೋರಾತ್ರಿ ನೋಟಿಸ್ ಕೊಟ್ಟಿರುವುದು ಸರಿಯಲ್ಲ. ಸಣ್ಣ ವ್ಯಾಪಾರಿಗಳಿಗೆ ಭಯ, ಆತಂಕಕ್ಕೆ ಒಳಗಾಗಿದ್ದಾರೆ. ಕೂಡಲೇ ರಾಜ್ಯ ಸರ್ಕಾರ ಈ ನೋಟಿಸ್‌ಗಳನ್ನು ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು.

ಈ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜಿಎಸ್‌ಟಿ ಸಂಗ್ರಹದಲ್ಲಿ ಕರ್ನಾಟಕ ದೇಶದಲ್ಲೇ ಮೊದಲ ಸ್ಥಾನಕ್ಕೆ ಬರಬೇಕು ಎಂದು ಬಹಿರಂಗವಾಗಿಯೇ ಹೇಳಿದ್ದರು. ಅದರಂತೆ ವಾಣಿಜ್ಯ ತೆರಿಗೆ ಇಲಾಖೆಗೆ ಹೆಚ್ಚಿನ ಗುರಿಯನ್ನು ನೀಡಿದ್ದರು. ಈಗ ಸಣ್ಣ ವ್ಯಾಪಾರಿಗಳಿಗೆ ಜಿಎಸ್‌ಟಿ ನೋಟಿಸ್ ನೀಡಿರುವುದನ್ನು ನೋಡಿದರೆ ಸತ್ಯ ಗೊತ್ತಾಗುತ್ತಿದೆ ಎಂದು ಟೀಕಿಸಿದರು. ಜಿಎಸ್‌ಟಿ ನೋಟಿಸ್ ವಿರೋಧಿಸಿ ಸಣ್ಣ ವ್ಯಾಪಾರಿಗಳು ನಡೆಸಿರುವ ಹೋರಾಟಕ್ಕೆ ಬಿಜೆಪಿ ಬೆಂಬಲ ನೀಡಲಿದೆ. ಸಣ್ಣ ವ್ಯಾಪಾರಿಗಳ ಪರ ಬಿಜೆಪಿ ನಿಲ್ಲಲಿದೆ ಎಂದು ಅವರು ಹೇಳಿದರು.

**ಕ್ಲೀನ್ ಚಿಟ್ ಕೊಟ್ಟಿಲ್ಲ:** ಮುಡಾ ಹಗರಣದಲ್ಲಿ ಸುಪ್ರೀಂ ಕೋರ್ಟ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕ್ಲೀನ್‌ಚಿಟ್ ಕೊಟ್ಟಿಲ್ಲ. ಇ.ಡಿ. ಸಮನ್ಸ್ ಅರ್ಜಿಯನ್ನು ಮಾತ್ರ ತಿರಸ್ಕರಿಸಿದೆ. ಹಾಗೆಂದ ಮಾತ್ರಕ್ಕೆ ಮುಖ್ಯಮಂತ್ರಿಯವರು ನಿರಪರಾಧಿ ಎಂದು ಸುಪ್ರೀಂ ಕೋರ್ಟ್ ಹೇಳಿಲ್ಲ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಾಗಿದೆ. ಮುಖ್ಯಮಂತ್ರಿಗಳು ಇವತ್ತೂ ಕೂಡ ಆರೋಪಿಯಾಗಿದ್ದಾರೆ ಎಂದು ಹೇಳಿದರು.

ಮುಡಾ ಹಗರಣದ ಬಗ್ಗೆ ಸಿಬಿಐ ತನಿಖೆ ಆಗಲೇಬೇಕು. ಈ ನಮ್ಮ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ. ಮುಖ್ಯಮಂತ್ರಿ ಮತ್ತು ಕುಟುಂಬದವರು ಈ ಹಗರಣದಲ್ಲಿ ಭಾಗಿದಾರರಾಗಿದ್ದಾರೆ. 14 ನಿವೇಶನಗಳು ಮುಖ್ಯಮಂತ್ರಿ ಕುಟುಂಬಕ್ಕೆ ಸಂಬಂಧಿಸಿವೆ. ಉಳಿದಂತೆ 5 ಸಾವಿರ ಕೋಟಿಗೂ ಹೆಚ್ಚು ಮೌಲ್ಯದ ನಿವೇಶನಗಳು ರಿಯಲ್ ಎಸ್ಟೇಟ್ ಏಜೆಂಟರ್ ಮೂಲಕ ಮಾರಾಟವಾಗಿವೆ. ಹಾಗಾಗಿ ಈ ಬಗ್ಗೆ ಸಿಬಿಐ ತನಿಖೆ ಸೂಕ್ತ ಎಂದರು.

ಧರ್ಮಸ್ಥಳದಲ್ಲಿ ಹೆಣಗಳನ್ನು ಹೂತಿರುವ ಪ್ರಕರಣದ ಬಗ್ಗೆ ಸರ್ಕಾರ ಎಸ್‌ಐಟಿ ರಚಿಸಿದೆ. ಆದಷ್ಟು ಬೇಗ ಪಾರದರ್ಶಕ ತನಿಖೆಯಾಗಿ, ಸತ್ಯಾಂಶ ಹೊರ ಬರಬೇಕು ಎಂಬುದು ಎಲ್ಲರ ಆಶಯ. ಹಾಗೆಂದು ಈ ವಿಚಾರ ಇಟ್ಟುಕೊಂಡು ಧರ್ಮಸ್ಥಳದ ವಾತಾವರಣ ಹಾಳು ಮಾಡುವ, ಅಪಪ್ರಚಾರ ಮಾಡುವುದನ್ನು ಸರ್ಕಾರ ತಡೆಯಬೇಕು. ಅಲ್ಲಿನ ವ್ಯವಸ್ಥೆ ಹಾಳು ಮಾಡಲು ಮುಂದಾದರೆ ಏನು ಮಾಡಬೇಕು ಎಂಬುದನ್ನು ನಾವು ಚರ್ಚಿಸಿ ತೀರ್ಮಾನಿಸುತ್ತೇವೆ ಎಂದರು.

**ಶಾಸಕರಿಂದ ತಪ್ಪಿಸಿಕೊಳ್ಳುವ ಕುತಂತ್ರ:**ರಾಜ್ಯದ ಕಾಂಗ್ರೆಸ್ ಶಾಸಕರಿಗೆ ಕ್ಷೇತ್ರದ ಅಭಿವೃದ್ಧಿಗೆ 50 ಕೋಟಿ ರೂ. ನೀಡುವುದಾಗಿ ಮುಖ್ಯಮಂತ್ರಿಗಳು ಹೇಳಿದ್ದಾರೆ ಅಷ್ಟೇ. ಇನ್ನೂ ಹಣ ನೀಡಿಲ್ಲ. ಅಧಿವೇಶನ ಆರಂಭವಾಗುತ್ತಿದೆ. ಅಧಿವೇಶನ ಸುಸೂತ್ರವಾಗಿ ನಡೆಯಬೇಕು ಎಂಬ ದೃಷ್ಟಿಯಿಂದ 50 ಕೋಟಿ ಅನುದಾನವನ್ನು ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. ಆದರೆ ಇನ್ನು ಹಣ ಬಿಡುಗಡೆಯಾಗಿಲ್ಲ ಎಂದರು.



ಆಡಳಿತ ಪಕ್ಷದ ಶಾಸಕರು ಹಾದಿ–ಬೀದಿಯಲ್ಲಿ ಅನುದಾನ ಇಲ್ಲ ಎಂದು ಸರ್ಕಾರದ ಮರ್ಯಾದೆ ತೆಗೆಯುತ್ತಿದ್ದಾರೆ. ಇದರಿಂದ ತಪ್ಪಿಸಿಕೊಳ್ಳಲು ಅನುದಾನದ ಷಡ್ಯಂತ್ರ ಮಾಡಲಾಗಿದೆ. ಅಧಿವೇಶನ ಸುಸೂತ್ರವಾಗಿ ನಡೆಯಲಿ ಎಂಬ ಕಾರಣಕ್ಕೆ ಅನುದಾನ ಬಿಡುಗಡೆಯ ಘೋಷಣೆಯನ್ನು ಮಾಡಲಾಗಿದೆ ಎಂದು ಅವರು ಹೇಳಿದರು.

ಕಾಂಗ್ರೆಸ್ ಪಕ್ಷದ ಕೆಲ ಪುಡಾರಿಗಳು ಬಿಜೆಪಿ ಕಾರ್ಯಾಲಯದ ಮುಂದೆ ದಾಂಧಲೆ ಮಾಡುವುದು, ಹೋರಾಟದ ನೆಪದಲ್ಲಿ ಗಲಾಟೆ ಮಾಡುವುದು ನಡೆದಿದೆ. ನಮ್ಮ ಕಾರ್ಯಕರ್ತರಿಗೂ ಶಕ್ತಿ ಇದೆ. ನಿಮ್ಮ ಪೊಲೀಸ್ ವ್ಯವಸ್ಥೆಯನ್ನು ಧಿಕ್ಕರಿಸಿ ಕಾಂಗ್ರೆಸ್ ಪಕ್ಷದ ಕಚೇರಿ ಮುಂದೆ ಹೋರಾಟ ಮಾಡುವ ಶಕ್ತಿ ನಮ್ಮ ಕಾರ್ಯಕರ್ತರಿಗೂ ಇದೆ. ಇದನ್ನು ಕಾಂಗ್ರೆಸ್‌ನವರು ಅರಿತುಕೊಳ್ಳಬೇಕು. ಕಾಂಗ್ರೆಸ್ ಕಾರ್ಯಕರ್ತರಿಗೆ ಹೋರಾಟದ ಚಟ ಇದ್ದರೆ ಅದಕ್ಕೆ ಸ್ವಾತಂತ್ರ್ಯ ಉದ್ಯಾನವನ ಇದೆ ಎಂಬುದನ್ನು ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ರವರ ಗಮನಕ್ಕೆ ತರುವುದಾಗಿಯೂ ಅವರು ಹೇಳಿದರು.

ಕಾಂಗ್ರೆಸ್‌ನ ಕೆಲ ಪುಡಾರಿಗಳು ಪದೇ ಪದೇ ಹೋರಾಟದ ನೆಪದಲ್ಲಿ ಗೂಂಡಾ ವರ್ತನೆ ಮಾಡುತ್ತಿದ್ದಾರೆ. ಇದು ಸರಿಯಲ್ಲ. ಈ ಬಗ್ಗೆ ನಾವು ಪೊಲೀಸ್ ಆಯುಕ್ತರಿಗೂ ದೂರು ನೀಡಿದ್ದೇವೆ ಎಂದು ಅವರು ಹೇಳಿದರು.

# ಲೋಕಾ ಬಲೆಗೆ ಭ್ರಷ್ಟರು

**ಬೆಂಗಳೂರು,ಜು.23–**ಬೆಂಗಳೂರು, ಮೈಸೂರು, ಕೊಪ್ಪಳ, ಬಳ್ಳಾರಿ,ಮಡಿಕೇರಿ ಸೇರಿ ರಾಜ್ಯದ ಹಲವೆಡೆ ಏಕಕಾಲದಲ್ಲಿ ದಾಳಿ ನಡೆಸಿರುವ ಲೋಕಾಯುಕ್ತ ಐಎಎಸ್ ಅಧಿಕಾರಿ ಡಾ. ವಾಸಂತಿ ಅಮರ್ ಸೇರಿ 8 ಮಂದಿ ಭ್ರಷ್ಟ ಅಧಿಕಾರಿಗಳನ್ನು ಬಲೆಗೆ ಕೆಡವಿ ಕೋಟ್ಯಂತರ ಮೌಲ್ಯದ ಅಕ್ರಮ ಆಸ್ತಿಪಾಸ್ತಿ ಪತ್ತೆಹಚ್ಚಿದ್ದಾರೆ.

ಐಎಎಸ್ ಅಧಿಕಾರಿ ವಾಸಂತಿ ಅಮರ್ ಅವರ ಆರ್.ಟಿ.ನಗರದಲ್ಲಿರುವ ಮನೆ ಮೇಲೆ ದಾಳಿ ಮಾಡಲಾಗಿದೆ. ಸರ್ಕಾರಿ ಜಮೀನು ಅಕ್ರಮವಾಗಿ ಬೇರೆಯವರ ಹೆಸರಿಗೆ ವರ್ಗಾವಣೆ ಆರೋಪ ಅವರ ವಿರುದ್ಧ ಕೇಳಿಬಂದಿದ್ದು,ಅವರ ಕಚೇರಿ ಮನೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಶೋಧ ಕೈಗೊಂಡಿದ್ದಾರೆ. ವಾಸಂತಿ ಅಮರ್ ಬೆಂಗಳೂರು ನಗರ ವಿಶೇಷ ಡಿಸಿಯಾಗಿ ಕಾರ್ಯ ನಿರ್ವಹಿಸುತ್ತಿದ್ದು,ಈಗ ರೈಲ್ವೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕಂಪನಿಯ ವಿಶೇಷ ಉಪ ಆಯುಕ್ತರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ನಗರ ಹಾಗೂ ಗ್ರಾಮೀಣ ಯೋಜನೆ ಅಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ಬಗಲಿ ಮಾರುತಿ ಹಾಗೂ ಬಿಬಿಎಂಪಿ ಸಿವಿರಾಮನ್ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಹೆಚ್.ವಿ.ಯಾರಪ್ಪ ರೆಡ್ಡಿ ಅವರ ಕಚೇರಿ ಮನೆಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಶೋಧ ಕೈಗೊಂಡಿದ್ದಾರೆ.

ಮೈಸೂರಿನಲ್ಲಿ ಸಿದ್ದಾರ್ಥ ಬಡಾವಣೆಯ ಪಾಲಿಕೆ ಉಪ ವಿಭಾಗಧಿಕಾರಿ ವೆಂಕಟರಾಮ್ ಮನೆ ಮೇಲೆ ದಾಳಿ ಪರಿಶೀಲನೆ ನಡೆಸಿದೆ.ಅದೇ ರೀತಿಯಾಗಿ ಮೈಸೂರಿನ ಸಾತಗಳ್ಳಿಯ ಜೆಪಿನಗರದಲ್ಲಿರುವ ಕೌಶಲ್ಯಾಭಿವೃದ್ಧಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥಸ್ವಾಮಿ ಮನೆ ಮೇಲೂ ದಾಳಿ ಮಾಡಲಾಗಿದೆ. ಆದಾಯಕ್ಕೂ ಮೀರಿ ಗಳಿಕೆ ಆರೋಪ ಕೇಳಿಬಂದಿದೆ.

**ಬಳ್ಳಾರಿ ಮೂರು ಕಡೆ ದಾಳಿ:** ಬಳ್ಳಾರಿಯಲ್ಲಿ ಮೂರು ಕಡೆ ಲೋಕಾಯುಕ್ತ ಅಧಿಕಾರಿಗಳ ದಾಳಿ ಮಾಡಲಾಗಿದೆ. ಬೆಂಗಳೂರು ಟೌನ್ ಮತ್ತು ರೂರಲ್ ಪ್ಲ್ಯಾನಿಂಗ್ ಆಫೀಸರ್ ಮಾರುತಿ ಬಗಲಿಗೆ ಸೇರಿದ 3 ಸ್ಥಳಗಳ ಮೇಲೆ ದಾಳಿ ಮಾಡಿರುವ ಬೆಂಗಳೂರು ಲೋಕಾಯುಕ್ತ ತಂಡ ಪರಿಶೀಲನೆ ನಡೆಸಿದೆ. ಬೆಂಗಳೂರು ನಿವಾಸಿಯಾಗಿರುವ ಅಧಿಕಾರಿ ಮಾರುತಿ ಬಗಲಿ ವಿರುದ್ಧ ರಾಜ್ಯದ ಹಲವೆಡೆ ಆಸ್ತಿ ಮಾಡಿರುವ ಆರೋಪ ಕೇಳಿಬಂದಿದೆ.




**ಕಕ್ಕಾಬಿಕ್ಕಿಯಾದ ಅಧಿಕಾರಿ:** ಕೊಪ್ಪಳ ನಗರದಲ್ಲೂ ದಾಳಿ ಮಾಡಿರುವ ಲೋಕಾಯುಕ್ತ ಅಧಿಕಾರಿಗಳು ಮನೆಯಲ್ಲಿ ಮಲಗಿದ್ದ ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ವಿಭಾಗದ ಉಪ ನಿರ್ದೇಶಕ ಶೆಕು ಚವ್ಹಾಣ್‌ಗೆ ಶಾಕ್ ನೀಡಿದ್ದಾರೆ. ಲೋಕಾ ಅಧಿಕಾರಿಗಳನ್ನು ಅವರು ಕಂಡು ಕಕ್ಕಾಬಿಕ್ಕಿಯಾಗಿದ್ದಾರೆ. ಲೋಕಾಯುಕ್ತ ಇನ್ಸ್‌ಪೆಕ್ಟರ್ ಸುನೀಲ ಮೇಗಳಮನಿ ನೇತೃತ್ವದಲ್ಲಿ ಅಭಿಷೇಕ ಬಡಾವಣೆ ಹಾಗೂ ಕೀರ್ತಿ ಕಾಲೋನಿಯಲ್ಲಿರುವ ಶೇಕು ಚವ್ಹಾಣ್‌ಗೆ ಸೇರಿದ ಎರಡು ಮನೆಗಳ ಮೇಲೆ ದಾಳಿ ಮಾಡಿ ಪರಿಶೀಲನೆ ನಡೆಸಿದ್ದಾರೆ. ಹುಬ್ಬಳ್ಳಿಯಲ್ಲೂ ಲೋಕಾಯುಕ್ತ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ.

**ಕಲಬುರ್ಗಿಯಲ್ಲಿ ಕರ್ತವ್ಯ:** ಬೀದರ್‌ನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಸುನೀಲ್ ಕುಮಾರ್ ಚಂದ್ರಪ್ರಭಾ ನಿವಾಸದ ಮೇಲೆ ದಾಳಿ ಮಾಡಲಾಗಿದೆ. ಇವರು ಕಲಬುರ್ಗಿ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂಜನಿಯರ್ ವಿಭಾಗದಲ್ಲಿ ಕಾರ್ಯ ನಿರ್ವಾಹಕ ಅಭಿಯಂತರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಬೀದರ್ ನ ಜೈಲ್ ಕಾಲೋನಿಯ ಎಸ್‌ಬಿಪಿ ನಗರದ ನಿವಾಸದ ಮೇಲೆ ದಾಳಿ ಮಾಡಿದ ಲೋಕಾಯುಕ್ತ ತಂಡ ದಾಖಲೆಗಳ ಪರಿಶೀಲನೆ ಕೈಗೊಂಡಿದೆ. ಹುಮ್ನಾಬಾದ್ ತಾಲೂಕಿನ ಹಳ್ಳಿಖೇಡ ಬಿ ಗ್ರಾಮದ ನಿವಾಸಿಯಾಗಿದ್ದು, ಸದ್ಯ ಕಲಬುರ್ಗಿಯಲ್ಲಿ ಕರ್ತವ್ಯ ಮಾಡುತ್ತಿದ್ದಾರೆ. ಹೀಗಾಗಿ, ಕಲಬುರ್ಗಿಯ ಆರೋಗ್ಯ ಇಲಾಖೆಯ ಕಚೇರಿ ಹಾಗೂ ನಿವಾಸದ ಮೇಲೂ ದಾಳಿ ಮಾಡಲಾಗಿದೆ.

**ತುಮಕೂರಿನಲ್ಲಿ ದಾಳಿ:** ತುಮಕೂರಿನಲ್ಲಿ ಕೆಐಡಿಬಿ ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಎಇಇ ರಾಜೇಶ್ ಕಚೇರಿ ಕಡತಗಳ ಪರಿಶೀಲನೆ ನಡೆಸಿದ್ದಾರೆ. ಕಳೆದ ಒಂದು ತಿಂಗಳ ಹಿಂದಷ್ಟೇ ತುಮಕೂರಿನ ಕೆಐಎಡಿಬಿ ಕಚೇರಿಗೆ ರಾಜೇಶ್ ಬಂದಿದ್ದರು.

# ಕೈ ಮುಖಂಡ ಭೀಮಾಶಂಕರ್‌ಗೆ ಸೇರಿದ 5.82 ಕೋಟಿ ಜಪ್ತಿ



**ಕಲಬುರಗಿ,ಜು.23–**ಇಲ್ಲಿನ ಎಂಆರ್‌ಎಂಸಿ ಮೆಡಿಕಲ್ ಕಾಲೇಜ ಶಿಷ್ಯ ವೇತನ ಹಗರಣಕ್ಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆ (ಹೆಚ್‌ಕೆಇ) ಮಾಜಿ ಅಧ್ಯಕ್ಷ, ಕಾಂಗ್ರೆಸ್ ಮುಖಂಡ ಭೀಮಾಶಂಕರ್ ಬಲಗುಂದಿ ಅವರ 5.87 ಕೋಟಿ ರೂ ಆಸ್ತಿಯನ್ನು ಇ.ಡಿ ಜಪ್ತಿ ಮಾಡಿದೆ.

2018 ರಿಂದ 2024 ರ ವರೆಗಿನ ಮೆಡಿಕಲ್ ಕಾಲೇಜ್ ವಿದ್ಯಾರ್ಥಿಗಳ ಶಿಷ್ಯ ವೇತನದಲ್ಲಿ ಅಂದಾಜು 82 ಕೋಟಿ ರೂ. ಹಗರಣ ನಡೆದಿತ್ತು. ಈ ಬಗ್ಗೆ ಸೆನ್ ಪೊಲೀಸ್ ಠಾಣೆಯಲ್ಲಿ ಭೀಮಾಶಂಕರ್ ಬಿಲಗುಂದಿ, ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಂ. ಪಾಟೀಲ್, ಕಾಲೇಜಿನ ಅಕೌಂಟೆಂಟ್ ಸುಭಾಷ್ ಜಗನ್ನಾಥ ಮತ್ತು ಕೆನರಾ ಬ್ಯಾಂಕ್ ಎಂಆರ್‌ಎಂಸಿ ಶಾಖೆಯ ವ್ಯವಸ್ಥಾಪಕರ ವಿರುದ್ಧ ಪ್ರಕರಣ ದಾಖಲಾಗಿತ್ತು. ಇದರ ಬೆನ್ನಲ್ಲೆ ಕಳೆದ ಮಾರ್ಚ್‌ನಲ್ಲಿ ಇ.ಡಿ ಅಧಿಕಾರಿಗಳಿಂದ ಭೀಮಾಶಂಕರ್ ಬಲಿಗುಂದಿ ಸೇರಿ ನಾಲ್ವರ ಮನೆ ಮೇಲೆ ಇ.ಡಿ ದಾಳಿ ಮಾಡಿತ್ತು.

**ಕೋಟ್ಯಂತರ ಶಿಷ್ಯವೇತನ ಗೋಲ್ ಮಾಲ್:** ಕಲಬುರಗಿಯ ಪ್ರತಿಷ್ಠಿತ ಹೆಚ್‌ಕೆಇ ಶಿಕ್ಷಣ ಸಂಸ್ಥೆಯ ಎಂಆರ್‌ಎಂಸಿ ಮೆಡಿಕಲ್ ಕಾಲೇಜಿನಲ್ಲಿ ನಡೆದ ಶಿಷ್ಯವೇತನ ಹಗರಣ ಸಾಕಷ್ಟು ಸಂಚಲನ ಸೃಷ್ಟಿಸಿತ್ತು. ವೈದ್ಯಕೀಯ ವಿದ್ಯಾರ್ಥಿಗಳಿಗೆ ಬರುತ್ತಿದ್ದ ಶಿಷ್ಯವೇತನವನ್ನು ಕಾಲೇಜು ಆಡಳಿತ ಮಂಡಳಿ ನುಂಗಿ ಹಾಕಿರುವುದು ಬೆಳಕಿಗೆ ಬಂದಿತ್ತು. ಪಿಜಿ ವಿದ್ಯಾರ್ಥಿಗಳಿಗೆ ಬರುತ್ತಿದ್ದ ಶಿಷ್ಯವೇತನವನ್ನು ಬ್ಲಾಂಕ್ ಚೆಕ್ ಪಡೆದು ವಿದ್ಯಾರ್ಥಿಗಳಿಗೆ ವಂಚಿಸಲಾಗಿತ್ತು. ಈ ಬಗ್ಗೆ ವಿದ್ಯಾರ್ಥಿಗಳು ಕೂಡ ಧರಣಿ ಮಾಡಿದ್ದರು.


ಮೆಡಿಕಲ್ ಕಾಲೇಜಿನ 300ಕ್ಕೂ ಅಧಿಕ ಪಿಜಿ ವಿದ್ಯಾರ್ಥಿಗಳಿಗೆ ತಿಂಗಳಿಗೆ 40 ರಿಂದ 45 ಸಾವಿರ ರೂ. ಶಿಷ್ಯವೇತನ ಬರುತ್ತಿತ್ತು. ಹೀಗೆ 81 ಕೋಟಿ ರೂ. ಶಿಷ್ಯವೇತನ ಹಣವನ್ನು ಕಾಲೇಜು ಆಡಳಿತ ಮಂಡಳಿ ಗುಳುಂ ಮಾಡಿತ್ತು.

# ಡೇ–ನಲ್ಮ ಯೋಜನೆಯ ಸಾಲ ಮಂಜೂರಾತಿಯಲ್ಲಿ ಅವ್ಯವಹಾರ

**ಕಲಬುರಗಿ,ಜು.23–** ಮಹಾನಗರ ಪಾಲಿಕೆ ಡೇ–ನಲ್ಮ ಯೋಜನೆಯಲ್ಲಿ ಸಾಲ ಮಂಜೂರಾತಿಯಲ್ಲಿ ಅವ್ಯವಹಾರ ನಡೆದಿದ್ದು, ಈ ಕುರಿತು ತನಿಖೆ ಕೈಗೊಂಡು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಜೈ ಕನ್ನಡಿಗರ ಸೇನೆ ಒತ್ತಾಯಿಸಿದೆ.

ಕಳೆದ 2023–24 ಮತ್ತು 2024025ನೇ ಸಾಲಿನಲ್ಲಿ ಆಟೋ ರಿಕ್ಷಗಳ ಡೇ–ನಲ್ಮ ಸಾಲ ಯೋಜನೆಯಲ್ಲಿ ಬಂದಿರುವ ಒಟ್ಟು 430 ಅರ್ಜಿಗಳಲ್ಲಿ 55 ಅರ್ಜಿಗಳನ್ನು ನೇರವಾಗಿ ಅಧಿಕಾರಿಗಳ ಹಸ್ತಕ್ಷೆಪದ ಮುಖಾಂತರ ಆಯ್ಕೆಯಾಗಿರುತ್ತವೆ, ಪ್ರತಿ ಬ್ಯಾಂಕುಗಳು ಇಂತಿಷ್ಟು ಜನರಿಗೆ ಮಾತ್ರ ಸಾಲ ಸೌಲಭ್ಯ ನಿಡಲು ಅವಕಾಶ ಇರುತ್ತದೆ ಆದರೇ ನಿಯಮ ಬಾಹಿರವಾಗಿ ಪಾಲಿಕೆಯ ಅಧಿಕಾರಿಗಳು ಮತ್ತು ಬ್ಯಾಂಕಿನ ವ್ಯವಸ್ಥಾಪಕರು ತಮಗೆ ಬೇಕಾದವರಿಗೆ ಈ ಯೋಜನೆಯ ಸೌಲಭ್ಯ ದೊರಕಿಸಿಕೊಡಲು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ ಎಂದು ಸೇನೆಯ ಅಧ್ಯಕ್ಷ ದತ್ತು ಎಚ್.ಭಾಸಗಿ ಅವರು, ತಮ್ಮ ಮನವಿಯಲ್ಲಿ ದೂರಿದ್ದಾರೆ.

ನಿಯಮಬಾಹಿರವಾಗಿ ನಡೆಯುತ್ತಿರುವ ಸಾಲ ಸೌಲಭ್ಯದ



ಅವ್ಯವಹಾರಕ್ಕೆ ಕಡಿವಾಣ ಹಾಕಬೇಕು, ಅರ್ಹ ಫಲಾನುಭವಿಗಳಿಗೆ ಮಾತ್ರ ಈ ಯೋಜನೆಯ ಲಾಭ ದೊರಕುವಂತಾಗಬೇಕು ಎಂದು ಅವರು ಒತ್ತಾಯಿಸಿದ್ದಾರೆ. ನಿಯೋಗದಲ್ಲಿ ದತ್ತು ಭಾಸಗಿ, ಮಲ್ಲು ಆಲಗೂಡ, ಸುಭಾಷ ಸಾಗರ, ನವೀನ ಧುಮ್ಮನಸೂರ, ಅನಿಲ ತಳವಾರ ಮತ್ತು ಜೈಕನ್ನಡಿಗರ ರಕ್ಷಣಾ ವೇದಿಕೆ ಅಧ್ಯಕ್ಷ ಸಚಿನ ಫರತಾಬಾದ, ಅಕ್ಷಯಕುಮಾರ,ಚಿಂಟು ಜಮಾದಾರ, ಅಂಕುಶ ಬಿಲ್ಲುರ, ರವಿ ಸಜ್ಜನ ಸೇರಿದಂತೆ ಹಲವರಿದ್ದರು.

# ರಸ್ತೆ ಬದಿಯಲ್ಲಿನ ಮರಗಳಲ್ಲಿ ಹಕ್ಕಿ ಮರಿಗಳು



ಯುವ ಮಾರ್ಗ ಸುದ್ದಿ

**ಮಾನ್ವಿ,ಜು.23–** ಬೆಳ್ಳಕಿಗಳು ಸಾಮಾನ್ಯವಾಗಿ ಕೆರೆ ,ನದಿಗಳಲ್ಲಿ ದೊರೆಯುವ ಜಲಚಾರಗಳನ್ನು ಆಹಾರವಾಗಿ ಸೇವಿಸುತ್ತವೆ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಹರಿಯುವ ತುಂಗಭದ್ರ ನದಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿವಿಧ ಪ್ರಕಾರದ ಬೆಳ್ಳಕಿಗಳನ್ನು ಕಾಣಬಹುದು ಪ್ರತಿ ವರ್ಷ ಜೂನ್ ಮೋದಲವಾರದಲ್ಲಿ ಗಂಡು ಮತ್ತು ಹೆಣ್ಣು ಜೋಡಿ ಬೆಳ್ಳಕ್ಕಿಗಳು ಗೂಡನ್ನು ಕಟ್ಟಿ ಗೂಡಿನಲ್ಲಿ ಮೊಟ್ಟೆಗಳನ್ನು ಇಟ್ಟು ಮರಿಗಳನ್ನು ಮಾಡಿಕೊಳ್ಳುತ್ತವೆ ನಂತರ ಮರಿಗಳು ದೊಡವಾದ ನಂತರ ಹಾರಿ ಹೋಗುತ್ತವೆ.

ಮಾನ್ವಿ ಪಟ್ಟಣದ ಎತ್ತರವಾದ ಮರಗಿಡಗಳ ತುಂಬೆಲ್ಲ ಪ್ರತಿ ವರ್ಷ ಜೂನ್ ಮೊದಲವಾರದಲ್ಲಿ ಗುಂಪು ,ಗುಂಪಾಗಿ ಬೆಳ್ಳಕ್ಕಿಗಳು ಗೂಡು ಕಟ್ಟಿ ಮರಿ ಮಾಡಿಕೊಂಡು ಅವುಗಳನ್ನು ಪೋಷಿಸುತ್ತಿರುವುದನ್ನು ನೋಡುವುದಕ್ಕೆ ಆನಂದವಾಗುತ್ತದೆ ಶುಭ್ರವಾದ ಬಿಳಿ ಬಣ್ಣದ ಬೆಳ್ಳಕ್ಕಿಗಳು ಹಾಗೂ ಬಿಳಿ ಬಣ್ಣದ ಮರಿಗಳು ತುಂಬ ಆಕಾರ್ಷಕವಾಗಿರುತ್ತವೆ ಈ ಬಾರಿ ಕೂಡ ಪ್ರತಿ ವರ್ಷದಂತೆ ಸಿಂಧನೂರು ರಸ್ತೆಯ ಎರಡು ಬದಿಗಳಲ್ಲಿನ ಬೃಹತ್ ಮರಗಿಡಗಳ ತುಂಬೆಲ್ಲ ಬಿಳಿ ಬಣ್ಣದ ಬೆಳ್ಳಕ್ಕಿಗಳು ಗೂಡಿನಲ್ಲಿ ಮರಿಗಳ ಪಾಲನೆ ಮಾಡುವುದನ್ನು ಕಾಣಬಹುದಾಗಿದೆ . ಮಾನ್ವಿ ಸಿಂಧನೂರು ರಸ್ತೆಯನ್ನು ಚತುಷ್ಪತ್ ರಸ್ತೆಯನ್ನಾಗಿ ಅಭಿವೃದ್ಧಿ ಪಡಿಸುತ್ತಿರುವುದರಿಂದ ರಸ್ತೆ ನಿರ್ಮಾಣ ಸಂಸ್ಥೆಯವರು ರಸ್ತೆ ನಿರ್ಮಾಣಕ್ಕಾಗಿ ರಸ್ತೆ ಬದಿಯ ಬೃಹತ್ ಮರಗಿಡಗಳನ್ನು ಕಡಿಯುತ್ತಿರುವುದರಿಂದ ಮರಗಳಲ್ಲಿನ ಗೂಡುಗಳಲ್ಲಿನ ಮರಿ ಬೆಳ್ಳಕ್ಕಿಗಳು ಕೆಳಗೆ ಬಿದ್ದು ಸಾಯುತ್ತಿವೇ, ಇಲ್ಲವೇ ಪ್ರಾಣಿಗಳಿಗೆ ಆಹಾರವಾಗುತ್ತಿರುವುದು ಪಕ್ಷಿ ಪ್ರೀಯರಿಗೆ ಕಳವಳ ಮೂಡಿಸಿದೆ.

ಪಕ್ಷಿ ಪ್ರೇಮಿ ಸಲ್ಲಾವುದಿನ್ನ್ ಮಾತನಾಡಿ ಬೆಳ್ಳಕ್ಕಿಗಳು ರಸ್ತೆ ಬದಿಯಲ್ಲಿನ ಮರಗಿಡಗಳಲ್ಲಿ ಗೂಡು ಕಟ್ಟಿಕೊಂಡು ಅವುಗಳಲ್ಲಿ ಅನೇಕ ವರ್ಷಗಳಿಂದ ಮರಿಗಳನ್ನು ಮಾಡಿಕೊಂಡು ತಮ್ಮ ಮೂಲ ಸ್ಥಾನಗಳಿಗೆ ಮರಳುತ್ತಿವೇ. ಈ ಬಾರಿ ರಸ್ತೆ ನಿರ್ಮಾಣ ಸಂಸ್ಥೆಯವರು ರಸ್ತೆ ನಿರ್ಮಾಣಕ್ಕಾಗಿ ರಸ್ತೆ ಬದಿಯಲ್ಲಿನ ನೂರಾರು ಗಿಡ ಮರಗಳನ್ನು ಕಡಿದು ನಾಶ ಪಡಿಸುತ್ತಿದ್ದಾರೆ ಮರ ಕಡಿಯುವ ಸಮಯದಲ್ಲಿ ಮರದಲ್ಲಿ ವಾಸ ಮಾಡುತ್ತಿರುವ ಹಕ್ಕಿಗಳ ಬಗ್ಗೆ ಮರಿಗಳ ಬಗ್ಗೆ ಕಾಳಜಿ ವಹಿಸದೆ ಇರುವುದರಿಂದ ಹಕ್ಕಿ ಮರಿಗಳು ನಾಶ ವಾಗುತ್ತಿವೇ ಇನ್ನೂ ಕೇಲವೆ ದಿನಗಳಲ್ಲಿ ಬೆಳ್ಳಕ್ಕಿ ಮರಿಗಳು ರೆಕ್ಕೆ ಬಲಿತು ಹಾರುವುದನ್ನು ಕಲಿತು ಹಾರಿ ಹೊಗಲಿವೇ ಅಲ್ಲಿಯ ವರೆಗೆ ಮರಗಳನ್ನು ಕಡಿಯಬಾರದು ,ಮರಗಳನ್ನು ಕಡಿದ ನಂತರ ಮರದಲ್ಲಿ ವಾಸವಾಗಿರುವ ಹಕ್ಕಿಗಳನ್ನು ರಕ್ಷಿಸಿ ಪೋಷಣೆ ಮಾಡಬೇಕು ಎಂದು ಒತ್ತಾಯಿಸಿದರು. ವಲಯ ಅರಣ್ಯ ಅಧಿಕಾರಿ ಪುರುಷೋತ್ತಮ್ಮ ಮಾತನಾಡಿ ರಸ್ತೆ ಬದಿಯಲ್ಲಿನ ಮರಗಳಲ್ಲಿನ ಹಕ್ಕಿಗಳ ರಕ್ಷಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ನೀರಿಗೆ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದ ಯುವತಿ ಮೃತದೇಹ ಪತ್ತೆ

**ಕಲಬುರಗಿ,ಜು.23–**ಯುವಕನ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದ ಯುವತಿಯ ಮೃತದೇಹ ಪತ್ತೆಯಾಗಿದೆ. ಕಮಲಾಪುರ ತಾಲೂಕಿನ ಭುಸಣಗಿ ಗ್ರಾಮದ ಸಾಕ್ಷಿ ಉಪ್ಪಾರ್(22), ಅಭಿಷೇಕ್ ಎಂಬಾತನ ಕಿರುಕುಳಕ್ಕೆ ಬೇಸತ್ತು ಹೊಸ ಕುರಿಕೋಟ ಸೇತುವೆ ಸಮೀಪದ ಬೆಣ್ಣೆತೋರ ಹಿನ್ನೀರಿಗೆ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಳು. ಅಗ್ನಿಶಾಮಕ ದಳದ ಸತತ ಕಾರ್ಯಾಚರಣೆಯಿಂದ ಮೃತದೇಹ ಕೊನೆಗೂ ಪತ್ತೆಯಾಗಿದೆ. ಈ ಕುರಿತು ಮಹಾಗಾಂವ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಜ್ಯಮಟ್ಟದ ಶೂಟಿಂಗ್ ಚಾಂಪಿಯನ್‌ಶಿಪ್ ಗ್ಲೋಬಲ್ ಸೈನಿಕ ಅಕಾಡೆಮಿ ಮಕ್ಕಳಿಗೆ 14 ಪದಕ




**ಬೀದರ್,ಜು.23–**ಬೆಂಗಳೂರಿನಲ್ಲಿ ಸೋಮವಾರ ನಡೆದ ರಾಜ್ಯಮಟ್ಟದ ಶೂಟಿಂಗ್ ಚಾಂಪಿಯನ್‌ಶಿಪ್‌ನ ವಿವಿಧ ವಿಭಾಗಗಳಲ್ಲಿ ನಗರದ ಗ್ಲೋಬಲ್ ಸೈನಿಕ ಅಕಾಡೆಮಿಯ ಮಕ್ಕಳು 14 ಪದಕಗಳ ನ್ನು ಜಯಿಸಿ ಸಾಧನೆ ಮಾಡಿದ್ದಾರೆ.

ನಾಲ್ಕು ವಿದ್ಯಾರ್ಥಿಗಳು 14 ಪದಕಗಳನ್ನು ಬಾಚಿಕೊಂಡಿದ್ದು, ಇವರಲ್ಲಿ ಅನ್ವಿ 2 ಚಿನ್ನ, 2 ಬೆಳ್ಳಿ, 1 ಕಂಚು, ಅನುಷ್ಕಾ 2 ಚಿನ್ನ, 2 ಬೆಳ್ಳಿ, ನಿಶಾ 2 ಚಿನ್ನ, 2 ಬೆಳ್ಳಿ ಹಾಗೂ ಇಶಾ 1 ಬೆಳ್ಳಿ ಪದಕ ಗೆದ್ದುಕೊಂಡಿದ್ದಾರೆ. ಬೀದರ್ ಸೇರಿದಂತೆ ಕಲ್ಯಾಣ ಕರ್ನಾಟಕದ ಮಕ್ಕಳಲ್ಲಿ ಅಡಗಿರುವ ಪ್ರತಿಭೆ ಹೊರ ತರಬೇಕು ಎನ್ನುವುದು ಅಕಾಡೆಮಿ ಕನಸಾಗಿತ್ತು. ಅದು ಈಗ ಸಾಕಾರವಾಗಿದೆ. ಮಕ್ಕಳ ಸಾಧನೆ ಹೆಮ್ಮೆ ಉಂಟು ಮಾಡಿದೆ ಅಕಾಡೆಮಿಯ ಅಧ್ಯಕ್ಷ, ನಿವೃತ್ತ ಕರ್ನಲ್ ಶರಣಪ್ಪ ಸಿಕೇನಪುರ ಹೇಳಿದ್ದಾರೆ.

ತರಬೇತುದಾರ ಕ್ಯಾಪ್ಟನ್ ಪಾಲಂಗಪ್ಪ, ಪ್ರಾಚಾರ್ಯೆ ಸಮೋದ್ ಮೋಹನ್, ಸಾರ್ವಜನಿಕ ಸಂಪರ್ಕ ಅಧಿಕಾರಿ ಕಾರಂಜಿ ಸ್ವಾಮಿ, ಮುಖ್ಯಶಿಕ್ಷಕಿ ಜ್ಯೋತಿ ರಾಗ, ಶಿಕ್ಷಕ ಸುನೀಲ್ ಅವರು ವಿದ್ಯಾರ್ಥಿಗಳ ಸಾಧನೆಗೆ ಸಂತಸ ವ್ಯಕ್ತಪಡಿಸಿದ್ದಾರೆ.ಅದ್ದೂರಿ ಸ್ವಾಗತ: ಪದಕ ಗೆದ್ದು ರೈಲು ಮೂಲಕ ನಗರದ ರೈಲು ನಿಲ್ದಾಣಕ್ಕೆ ಬಂದ ಮಕ್ಕಳನ್ನು ಅದ್ದೂರಿಯಾಗಿ ಸ್ವಾಗತಿಸಿ ಬರಮಾಡಿಕೊಳ್ಳಲಾಯಿತು.

ಶರಣಪ್ಪ ಸಿಕೇನಪುರ, ಬಿಡಿಎ ಮಾಜಿ ಅಧ್ಯಕ್ಷ ಬಾಬುವಾಲಿ, ಡಾ. ರಘು ಕೃಷ್ಣಮೂರ್ತಿ, ಕಲ್ಯಾಣ ಕರ್ನಾಟಕ ಖಾಸಗಿ ಶಾಲಾ ಆಡಳಿತ ಮಂಡಳಿ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ರೇವಣಸಿದ್ದಪ್ಪ ಜಲಾದೆ, ಅಧ್ಯಕ್ಷ ರಾಜೇಂದ್ರ ಮಣಗೆರೆ, ಗಣಪತಿ ಸೋಲಪುರ, ಸಂತೋಷಕುಮಾರ ಮಂಗಳೂರೆ ಮತ್ತಿತರರು ಮಕ್ಕಳನ್ನು ಸನ್ಮಾನಿಸಿ ಪ್ರೋತ್ಸಾಹಿಸಿದರು.

ನಂತರ ಅಲಂಕೃತ ರಥದಲ್ಲಿ ರೈಲು ನಿಲ್ದಾಣದಿಂದ ಅಕಾಡೆಮಿ ವರೆಗೆ ಮಕ್ಕಳ ಮೆರವಣಿಗೆ ನಡೆಯಿತು.

# ರಾಜಕಾರಿಣಿ ಹಾಗೂ ಮಠಾಧೀಶರಿಗೂ ನಿವೃತ್ತಿ ನಿಗದಿಯಾಗಲಿ : ಹುಲಸೂರು ಶ್ರೀಗಳು



**ಬೀದರ,ಜು.23–**ಸರಕಾರಿ ಅಧಿಕಾರಿಗಳಿಗೆ ಇರುವ ವಯೋನಿವೃತ್ತಿಯು ನಮ್ಮ ರಾಜಕಾರಿಣಿ ಹಾಗೂ ಮಠಾಧೀಶರಿಗೂ ನಿಗದಿಯಾಗಲಿ. ಅವಶ್ಯವಿದಲ್ಲಿ ಹತ್ತು ವರ್ಷ ಇವರಿಗೆ ಹೆಚ್ಚರಲಿ ಎಲ್ಲರಿಗೂ ವಯೋನಿವೃತ್ತಿ ಕಡ್ಡಾಯವಾಗಿರಲಿ ಎಂದು ಹುಲಸೂರು ಗುರುಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಡಾ. ಶಿವಾನಂದ ಮಹಾಸ್ವಾಮಿಗಳವರು ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಬೀದರ ಹಾಗೂ ಶಿವರಾಜ ಪಾಟೀಲ ಬಲ್ಲೂರ ಅಭಿಮಾನಿ ಬಳಗವು ನಗರದ ಸಾಯಿ ಪುಷ್ಪಾಂಜಲಿ ಫಂಕ್ಷನ್ ಹಾಲ್‌ನಲ್ಲಿ ಆಯೋಜಿಸಿದ ಶಿವರಾಜ ಪಾಟೀಲ ಬಲ್ಲೂರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಉಪ ವಿಭಾಗ, ಆಳಂದ ಅವರ ವಯೋನಿವೃತ್ತಿಯ ಅಭಿನಂದನಾ ಸಮಾರಂಭದಲ್ಲಿ ಸಾನಿಧ್ಯವಹಿಸಿ ಆಶೀರ್ವಚನ ನುಡಿ ನುಡಿಯುತ್ತ ಪಾಟೀಲ ಶಿವರಾಜ ಅವರು ಸೇವೆಯಿಂದ ನಿವೃತ್ತಿಯಾಗಿದ್ದಾರೆ, ಸಮಾಜದಿಂದ ಅಲ್ಲ. ಸಾವಾಜಿಕ ಸೇವೆಗೆ ತೊಡಗಿಸಿಕೊಳ್ಳಲು ಇದೊಂದು ಸದಾವಕಾಶ.ವೆಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿ ಅಧ್ಯಕ್ಷರಾದ ಸುರೇಶ ಚನಶೆಟ್ಟಿ ಅವರು ಮಾತನಾಡುತ್ತ ಉತ್ತಮ ಸೇವೆ ಸಲ್ಲಿಸಿದವರಿಗೆ ಗೌರವಿಸುವುದು ಪ್ರಜ್ಞಾವಂತ ನಾಗರಿಕ ಸಮಾಜದ ಆದ್ಯ ಕರ್ತವ್ಯವಾಗಿದೆ. ಶಿವರಾಜ ಪಾಟೀಲರ ಉತ್ತಮ ಸೇವೆ ಮಾದರಿಯಾಗಿರುವುದು ಈ ಸಮಾರಂಭ ಆಯೋಜಿಸ`ಲಾಗಿದೆ ಎಂದು ನುಡಿದರು.

ಸಂತಪುರ ಸರಕಾರಿ ಪ್ರೌಢಶಾಲೆ ಸಹ ಶಿಕ್ಷಕರಾದ ಡಾ. ಶಿವಲಿಂಗ ಹೇಡೆ ಅಭಿನಂದನಾ ನುಡಿ ನುಡಿಯುತ್ತ ನಿವೃತ್ತಿಯೆಂಬುದು ಸರಕಾರಿ ಸೇವೆಗೆ ಮಾತ್ರ, ಸಮಾಜ ಸೇವೆ ನಿರಂತರ. ಸ್ವಾಸ್ಥ ಸಮಾಜ ಕಟ್ಟಲು ಸರಳಜೀವನ ಶ್ರೇಷ್ಠ ಅದನ್ನು ಶಿವರಾಜ ಪಾಟೀಲ ಬಲ್ಲೂರ ಪೂರೈಸುತ್ತಿದ್ದಾರೆ. ಅದಕ್ಕೆ ಇಲ್ಲಿ ಸೇರಿದ ಅಭಿಮಾನಿ ಬಳಗವೇ ಸಾಕ್ಷಿ ಎಂದು ಹೇಳುತ್ತ ಅವರ ಬದುಕಿನ ಎಳೆಗಳನ್ನು ಬಿಚ್ಚಿಟ್ಟರು.

ಕರ್ನಾಟಕ ಲೋಕೋಪಯೋಗಿ ಇಲಾಖೆಯ ನಿವೃತ್ತ ಕಾರ್ಯನಿರ್ವಾಹಕ ಅಭಿಯಂತರರಾದ ಎನ್. ಎ. ಪಾಟೀಲವರು ಸಮಾರಂಭ ಉದ್ಘಾಟಿಸಿ ಮಾತನಾಡುತ್ತ ವಯೋನಿವೃತ್ತಿ ನಿರಾಶವಲ್ಲ ಅದು ಒತ್ತಡರಹಿತವಾದ ನಿಜಜೀವನದ ಆರಂಭವೆಂದು ಹೇಳಿದರು.ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಕರ್ನಾಟಕ ಲೋಕೋ ಪರ್ಯೋಗಿ ಇಲಾಖೆಯ ಬೀದರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಾದ ಶಿವಶಂಕರ ಕಾಮಶೆಟ್ಟಿಯವರು ಮಾತನಾಡುತ್ತ ಮನುಷ್ಯರ ಬೆಳವಣಿಗೆಯಲ್ಲಿ ಸಮಾಜದ ಋಣವಿದೆ. ನಿವೃತ್ತಿಯ ನಂತರ ಅದನ್ನು ತೀರಿಸಲು ಸಾಧ್ಯವಿದೆ ಎಂದು ನುಡಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಬೀದರವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಾದ ರಾಮಲಿಂಗ ಬಿರಾದಾರ ಅವರು ಮಾತನಾಡುತ್ತ ಜನರ ಸಮಸ್ಯಗಳಿಗೆ ತಕ್ಷಣ ಸಹಸ್ಪಂದಿಸುವ ಗುಣ ಅಧಿಕಾರಿಗಲ್ಲಿರಬೇಕು ಅದು ಶಿವರಾಜ ಪಾಅಟೀಲರಲ್ಲಿದೆ. ಅದರಿಂದ ಮೇಲಾದಿಕಾರಿಗಳು ನೆಮ್ಮದಿಯಿಂದಿರಲು ಸಾಧ್ಯವೆಂದದು ಹೆಳಿದರು.

ನಿವೃತ್ತ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮಲ್ಲಿಕಾರ್ಜುನ ಶಂಭು ಅವರು ಮಾತನಾಡುತ್ತ ಇದೊಂದು ಅಪರೂಪದ ಕಾರ್ಯಕ್ರಮವು ಉಳಿದವರಿಗೆ ಇದು ಮಾದರಿಯಾಗಲೆಂದು ನುಡಿದರು.

ಸನ್ಮಾನಕ್ಕೆ ಭಾಜನರಾದ ನಿವೃತ್ತ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಶಿವರಾಜ ಪಾಟೀಲ ಬಲ್ಲೂರ ತಮ್ಮ ಬದುಕಿನ ಯಶೋಗಾಥೆ ಹಂಚಿಕೊಂಡರರು.ಜಿಲ್ಲಾ ಬಸವಕೇಂದ್ರದ ಅಧ್ಯಕ್ಷ ಶರಣಪ್ಪ ಮಿಠಾರೆ, ಚಂದ್ರಕಾಂತ ಮಿರ್ಚೆ, ಶರಣಪ್ಪ ಬಲ್ಲೂರ, ಪ್ರಭು ಮಂಗಣೆ ಮೆಹಕರ, ಶಿಕ್ಷಕಿ ಶೋಭಾ ಪಾಟೀಲ ಮೊದಲಾದವರು ವೇದಿಕೆ ಮೇಲೆ ಉಪಸ್ಥಿತರಿದ್ದರು.ಡಾ. ಬಸವರಾಜ ಬಲ್ಲೂರ ನಿರೂಪಿಸಿದರೆ, ಮಹಾದೇವ ಪಾಟೀಲ, ಸ್ವಾಗತಿಸಿದರು. ದೇವೇಂದ್ರ ಕರಂಜೆ ವಂದಿಸಿದರು.

# ಉಪರಾಷ್ಟ್ರಪತಿ ಸ್ಥಾನಕ್ಕೆ ನಿತೀಶ್ ಹೆಸರು ಮುನ್ನೆಲೆಗೆ

**ನವದೆಹಲಿ,ಜ.23–** ದಿಢೀರ್ ಬೆಳವಣಿಗೆಯಲ್ಲಿ ಉಪರಾಷ್ಟ್ರಪತಿ ಸ್ಥಾನಕ್ಕೆ ಜಗದೀಪ್ ಧನಕರ್ ರಾಜೀನಾಮೆ ನೀಡಿದ ನಂತರ ಅವರಿಂದ ತೆರವಾದ ಸ್ಥಾನಕ್ಕೆ ಮುಂದಿನ ಆಯ್ಕೆ ಯಾರು ಎನ್ನುವ ಕುತೂಹಲ ಕೆರಳಿಸಿರುವ ಬೆನ್ನಲ್ಲೇ ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಹೆಸರು ಮುನ್ನೆಲೆಗೆ ಬಂದಿದೆ.

ನಿತೀಶ್ ಕುಮಾರ್ ಅವರ ಜೊತೆಗೆ ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿಕೆ ಸಕ್ಸೇನಾ ಮತ್ತು ಜಮ್ಮು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಹೆಸರು ಕೇಳಿಬಂದಿದೆ. ಈ ಮೂರು ಮಂದಿಯಲ್ಲಿ ನಿತೀಶ್ ಕುಮಾರ್ ಅವರ ಹೆಸರು ಬಹುತೇಕ ಖಚಿತವಾಗುವ ಎಲ್ಲಾ ಸಾಧ್ಯತೆಗಳಿವೆ ಎನ್ನಲಾಗಿದೆ.


ಕೆಲವೇ ತಿಂಗಳಲ್ಲಿ ಬಿಹಾರ ವಿಧಾನಸಭೆಗೆ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಚುನಾವಣೆ ಮೇಲೆ ಕಣ್ಣಿಟ್ಟಿರುವ ಎನ್‌ಡಿಎ ಮೈತ್ರಿಕೂಟ ಮತ್ತೊಮ್ಮೆ ಅಧಿಕಾರ ಹಿಡಿಯುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನು ಮುಂದಿನ ಉಪರಾಷ್ಟ್ರಪತಿಯನ್ನಾಗಿ ಆಯ್ಕೆ ಮಾಡಲು ಮುಂದಾಗಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ.

ರಾಷ್ಟ್ರಪತಿ ನಂತರ ದೇಶದ ಎರಡನೇ ಅತ್ಯುನ್ನತ ಸ್ಥಾನವಾಗಿರುವ ಉಪರಾಷ್ಟ್ರಪತಿ ಹುದ್ದೆಗೆ ನಿತೀಶ್ ಕುಮಾರ್ ಅವರನ್ನು ಆಯ್ಕೆ ಮಾಡುವ ಮೂಲಕ ಬಿಹಾರದಲ್ಲಿ ಜನರ ಮನಸ್ಸು ಗೆಲ್ಲಲು ಬಿಜೆಪಿ ಮತ್ತು ಎನ್ ಡಿಎ ಮೈತ್ರಿಕೂಟ ಮುಂದಾಗಿದೆ ಎನ್ನಲಾಗಿದೆ. ಈಗಾಗಲೇ ಬಿಹಾರದಲ್ಲಿ ಜೆಡಿಯು ನಾಯಕ ಉಪೇಂದ್ರ ಖುಶ್ವಾ ಮತ್ತು ಎಲ್ ಜೆಪಿ ನಾಯಕ ಚಿರಾಗ್ ಪಾಸ್ವಾನ್ ಅವರು ನಿತೀಶ್ ಕುಮಾರ್ ಅವರ ಹೆಸರನ್ನು ಪ್ರಸ್ತಾಪ ಮಾಡಿದ್ದಾರೆ.

ಬಿಹಾರದಲ್ಲಿ 74 ವರ್ಷದ ನಿತೀಶ್ ಕುಮಾರ್ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದು ಹೊಸ ಪೀಳಿಗೆಗೆ ಅವಕಾಶ ಮಾಡಿಕೊಡಬೇಕು ಎಂದು ಉಪೇಂದ್ರ ಖುಶ್ವಾ ಸಲಹೆ ನೀಡಿದ್ದಾರೆ. ದೇಶದಲ್ಲಿ ಅತಿ ಹೆಚ್ಚು ವರ್ಷಗಳ ಕಾಲ ಮುಖ್ಯಮಂತ್ರಿ ಆಗಿ ಕೆಲಸ ಮಾಡಿದ ಅನುಭವ ಇರುವ ನಿತೀಶ್ ಕುಮಾರ್ ಉಪರಾಷ್ಟ್ರಪತಿ ಆಗಿ ಆಯ್ಕೆಯಾಗುವ ಸಾಧ್ಯತೆ ಇದೆ ಎನ್ನಲಾಗಿದೆ.

ನಿತೀಶ್ ಕುಮಾರ್ ಅವರ ಜೊತೆಗೆ ದೆಹಲಿಯ ಲೆಫ್ಟಿನೆಂಟ್ ಗವರ್ನರ್ ವಿಕೆ ಸಕ್ಸೇನಾ ಹೆಸರು ಉಪ ರಾಷ್ಟ್ರಪತಿ ಸ್ಥಾನಕ್ಕೆ ಕೇಳಿ ಬಂದಿದೆ. ದೆಹಲಿ ಉಪ ರಾಜ್ಯಪಾಲರಾಗಿ 3 ವರ್ಷ ಅಧಿಕಾರ ಪೂರ್ಣಗೊಳಿಸಿದ್ದಾರೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ 27 ವರ್ಷಗಳ ನಂತರ ಬಿಜೆಪಿ ಅಧಿಕಾರಕ್ಕೆ ಬರಲು ಪ್ರಮುಖ ಪಾತ್ರ ವಹಿಸಿದ ವಿಕೆ ಸಕ್ಸೇನಾ ಅವರಿಗೆ ಉಪರಾಷ್ಟ್ರಪತಿ ಸ್ಥಾನದ ಉಡುಗೊರೆ ನೀಡಲು ಬಿಜೆಪಿ ನಾಯಕತ್ವ ಮುಂದಾಗಿದೆ ಎನ್ನಲಾಗಿದೆ.

ದೆಹಲಿಯಲ್ಲಿ ಅರವಿಂದ್ ಕೇಜ್ರಿವಾಲ್ ನೇತೃತ್ವದ ಎಎಪಿ ಸರ್ಕಾರ



ಅಧಿಕಾರದಲ್ಲಿದ್ದ ಅವಧಿಯಲ್ಲಿ ಒಂದಿಲ್ಲೊಂದು ವಿಷಯಕ್ಕೆ ರಾಜ್ಯ ಸರ್ಕಾರದೊಂದಿಗೆ ಜೊತೆ ಜಟಾಪಟಿಗೆ ಇಳಿಯುವ ಮೂಲಕ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಸೇರಿ ಹಲವು ಸಚಿವರ ವಿರುದ್ಧ ಭ್ರಷ್ಟಾಚಾರ ಪ್ರಕರಣಗಳನ್ನು ತನಿಖೆಗೆ ಅವಕಾಶ ನೀಡಿ ಎಎಪಿ ಅಧಿಕಾರ ಕಳೆದುಕೊಳ್ಳುವಂತೆ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದರು, ಹೀಗಾಗಿ ಅವರನ್ನು ಪರಿಗಣಿಸುವ ಸಾಗಯತೆ ಇದೆ.

ಇವರಿಬ್ಬರ ಜೊತೆಗೆ ಜಮ್ಮು ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಮುಂದಿನ ತಿಂಗಳು 6 ರಂದು ಅಧಿಕಾರ ವಹಿಸಿಕೊಂಡು 5 ವರ್ಷ ಪೂರ್ಣಗೊಳಿಸಲಿದ್ದಾರೆ.

# ಚಿತ್ರ ಸುದ್ದಿ



**ಲಿಂಗಸುಗೂರು,ಜು.23–** ಪಟ್ಟಣದಲ್ಲಿ ತಂಜಿಮುಲ್ ಮುಸ್ಲಿಮೀನ್ ಕಮೀಟಿಗೆ ನೂತನವಾಗಿ ಅದ್ಯಕ್ಷರಾಗಿರುವ ರಯೀಸ್ ಚಾವೂಸ್ ಅವರನ್ನು ಪುರಸಭೆ ಸದಸ್ಯ ದೊಡ್ಡನಗೌಡ ಪಾಟೀಲ್, ಕಾಂಗ್ರೆಸ್ ಯುವ ಮುಖಂಡ ಸಂಜೀವಕುಮಾರ ಕಂದಗಲ್ ಮಂಗಳವಾರ ಸನ್ಮಾನಿಸಿ ಗೌರವಿಸಿದರು.

ಮುಖಂಡರಾದ ಮಹ್ಮದ್ ರಫಿ, ಖಾಜಾಹುಸೇನ್ ಪೂಲವಾಲೆ, ಎಕ್ಬಾಲ್, ಹಾರೂನ್, ಅಲ್ಲಾವುದ್ದೀನ್ ಪಟೇಲ್, ಜಹೀರುದ್ದೀನ್, ಅಹ್ಮದ್ ಸರ್ ಸೇರಿ ಇತರರಿದ್ದರು.

# ಹಡಪದ ಅಪ್ಪಣ್ಣ ಜಯಂತಿ ಆಚರಣೆ



ಯುವ ಮಾರ್ಗ ಸುದ್ದಿ

**ಸಿರವಾರ,ಜು.23–** ಪಟ್ಟಣದಲ್ಲಿ ಹಡಪದ ಅಪ್ಪಣ್ಣ ಜಯಂತಿ ಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಶಾಸಕ ಹಂಪಯ್ಯ ನಾಯಕ ಅವರ ಪುತ್ರ ಹಾಗೂ ವಕೀಲರಾದ ಶಿವರಾಜ ನಾಯಕ ಅವರು ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಶಿವರಾಜ ನಾಯಕ ಅವರು ಸಿರವಾರ ಪಟ್ಟಣದಲ್ಲಿ ನಡೆದ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಅವರು ಸಮಾಜದ ಮುಖಂಡರಿಗೆ ಜಯಂತಿ ಶುಭಾಶಯ ಕೋರಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಅಶೋಕ್ ಪವಾರ್, ಪಟ್ಟಣ ಪಂಚಾಯತಿ ಅಧ್ಯಕ್ಷ ಭೂಪನಗೌಡ, ಉಪಾಧ್ಯಕ್ಷೆ ಲಕ್ಷ್ಮಿ, ಮುಖ್ಯಾಧಿಕಾರಿ ತಿಮ್ಮಪ್ಪ ಜಗ್ಲಿ, ಅದೆಪ್ಪ, ಮುಖಂಡರಾದ ಅರಕೇರಿ ಶಿವಶರಣ ಸಾಹುಕಾರ್, ಸಿರವಾರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚುಕ್ಕಿ ಶಿವಕುಮಾರ್, ಎನ್. ಉದಯಕುಮಾರ್ ಸಾಹುಕಾರ್, ಜೆ. ದೇವರಾಜಗೌಡ, ಪಟ್ಟಣ ಪಂಚಾಯಿತಿ ಸದಸ್ಯರಾದ ಹಾಸನ್ ಅಲ್ಲಿ, ಮೌಲಾಸಾಬ್ ವರ್ಚಸ್, ಹಾಜಿ ಚೌದ್ರಿ, ಬಸವರಾಜ್ ಕಾರ್ಮಿಜ್, ತಾಲೂಕು ದಂಡಾಧಿಕಾರಿಗಳು ಸೇರಿದಂತೆ ಹಲವು ಗಣ್ಯರು ಮತ್ತು ಸಮಾಜದ ಬಂಧುಗಳು ಉಪಸ್ಥಿತರಿದ್ದರು.

# ಸರಳ ಸಾಮೂಹಿಕ ವಿವಾಹ



**ಬೀದರ,ಜು.23–**ಮಹಾಮಾನವ ಯುನಿವರ್ಸಲ್ ವೆಲ್‌ಫೇರ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಕಡು ಬಡವರಿಗಾಗಿ 2025–26ನೇ ಸಾಲಿನಲ್ಲಿ ಸಾಮೂಹಿಕ ವಿವಾಹ ಅರ್ಜಿಯನ್ನು ಆಹ್ವಾನಿಸಲಾಗಿದೆ. ವಿವಾಹಕ್ಕಾಗಿ ಆಸಕ್ತಿವುಳ್ಳವರು ಅಗಸ್ಟ್ 10 ರೊಳಗೆ ತಾವು ಖುದ್ದಾಗಿ ಸಂಸ್ಥೆಯ ಕಾರ್ಯಾಲಯದಲ್ಲಿ ಅರ್ಜಿ ಸಲ್ಲಿಸಬೇಕು, ಅರ್ಜಿಯ ಜೊತೆಗೆ ವಧು–ವರರ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ರ್‍ಯಾಶನ್ ಕಾರ್ಡ್, ಓಟರ್ ಐ.ಡಿ., ವಯಸ್ಸಿನ ಪ್ರಮಾಣ ಪತ್ರ (ಟಿಸಿ., ಅಂಕಪಟ್ಟಿ, ಶಾಲಾ ದಾಖಲಾತಿ ಅನಕ್ಷರಸ್ಥರಿಗಾಗಿ ವೈದ್ಯಕೀಯ ಪ್ರಮಾಣ ಪತ್ರ), ಪಾಸಪೋರ್ಟ್ ಅಳತೆ 2 ಭಾವಚಿತ್ರಗಳು, ಎಲ್ಲಾ ದಾಖಲಾತಿಗಳೊಂದಿಗೆ ದ್ವಿಪ್ರತಿಯಲ್ಲಿ ಅರ್ಜಿಯೊಂದಿಗೆ ಸಲ್ಲಿಸಬೇಕು. ಸಂಸ್ಥೆ ವತಿಯಿಂದ ಸಮಾಜ ಕಲ್ಯಾಣ ಇಲಾಖೆಯಿಂದ ರೂ. 50000/– ಮತ್ತು ಕಾರ್ಮಿಕ ಇಲಾಖೆಯಿಂದ ರೂ. 50000/– ಮಂಜೂರು ಮಾಡಿಸಿಕೊಡಲಾಗುವುದು ಎಂದು ಸಂಸ್ಥೆಯ ಅಧ್ಯಕ್ಷರಾದ ಅಶೋಕ ಕುಮಾರ ಮಾಳಗೆಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಅಧ್ಯಕ್ಷರು / ಕಾರ್ಯದರ್ಶಿ 9740240358/ 9739417617 ಗೆ ಸಂಪರ್ಕಿಸಬಹುದು ಎಂದು ಅರುಣ ಪಟೇಲ್, ಅಶೋಕ ಮಾಳಗೆ ತಿಳಿಸಿದ್ದಾರೆ (ಸೂಚನೆ: ಹುಡಗಿಯ ವಯಸ್ಸು 18 ತುಂಬಿರಬೇಕು, ಗಂಡಿಗೆ 21 ವರ್ಷ ತುಂಬಿರಬೇಕು, ಬಾಲ್ಯ ವಿವಾಹ ನಿಷೇಧಿಸಲಾಗಿದೆ

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H